ಸಂಪುಟ : 10 ಸಂಚಿಕೆ: 292 ಪುಟ : 4+2 ಬೆಲೆ: 3.00 ರವಿವಾರ ಜನವರಿ 04 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 292 Pages : 4+2 Price : 3.00 Sunday January 04 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಗದಗ ಜಿಲ್ಲಾ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ, ಸಾಂಸ್ಕೃತಿಕ ಸ್ಪರ್ಧೆಗಳ ಸಮಾರಂಭವನ್ನು ಉದ್ಘಾಟಿಸಿದ ವಿ.ಪ ಸದಸ್ಯ ಎಸ್.ವಿ. ಸಂಕನೂರ

# ಕ್ರೀಡಾಸಕ್ತಿಯಿಂದ ಮಾನಸಿಕ, ದೈಹಿಕ ಸದೃಢತೆ



ಸರ್ಕಾರಿ ನೌಕರರ ಇಡೀ ಕುಟುಂಬವು ಅವರ ಮೇಲೆ ಅವಲಂಬಿತವಾಗಿರುತ್ತದೆ. ಒಂದು ವೇಳೆ ಕಚೇರಿ ಕೆಲಸದ ಅತಿಯಾದ ಒತ್ತಡದಿಂದ ನೌಕರರಿಗೆ ಆರೋಗ್ಯ ಸಮಸ್ಯೆ ಉಂಟಾದಲ್ಲಿ ಅವರ ಕುಟುಂಬವು ಸಂಕಷ್ಟಕ್ಕೆ ಒಳಗಾಗುತ್ತದೆ. ಈ ನಿಟ್ಟಿನಲ್ಲಿ ಅವರು ಕೆಲಸದ ಒತ್ತಡದಿಂದ ಹೊರಬಂದು ಮಾನಸಿಕ ಹಾಗೂ ದೈಹಿಕ ಆರೋಗ್ಯವನ್ನು ಕಾಪಾಡಿಕೊಳ್ಳಬೇಕಾದರೆ ಕನಿಷ್ಠ 1 ತಾಸು ಕ್ರೀಡಾ ಚಟುವಟಿಕೆಗಳಲ್ಲಿ ಪಾಲ್ಗೊಳ್ಳಬೇಕು ಅಥವಾ ಯೋಗ, ಧ್ಯಾನ, ವಾಕಿಂಗ್, ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಪಾಲ್ಗೊಂಡು ಒತ್ತಡಮುಕ್ತ ವಾತಾವರಣ ನಿರ್ಮಿಸಿಕೊಳ್ಳಬೇಕು ಎಂದು ಎಸ್.ವಿ. ಸಂಕನೂರ ತಿಳಿಸಿದರು.



■ **ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರದ ಯೋಜನೆಗಳನ್ನು ಹಾಗೂ ಅಭಿವೃದ್ಧಿ ಕಾರ್ಯಕ್ರಮಗಳನ್ನು ಸಮರ್ಪಕವಾಗಿ ಅನುಷ್ಠಾನಕ್ಕೆ ತರುವಲ್ಲಿ ಸರ್ಕಾರಿ ನೌಕರರ ಪಾತ್ರ ಮಹತ್ವದ್ದಾಗಿದೆ. ನೌಕರರು ಕ್ರೀಡಾ ಚಟುವಟಿಕೆಗಳಲ್ಲಿ ಪಾಲ್ಗೊಂಡು ತಮ್ಮ ಮಾನಸಿಕ ಹಾಗೂ ದೈಹಿಕ ಆರೋಗ್ಯವನ್ನು ಕಾಪಾಡಿಕೊಂಡಾಗ ಮಾತ್ರ ಸರಿಯಾಗಿ ಕಚೇರಿ ಕೆಲಸ ನಿರ್ವಹಿಸಲು ಸಾಧ್ಯವಾಗುತ್ತದೆ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ತಿಳಿಸಿದರು.

ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಶನಿವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಗದಗ ಜಿಲ್ಲಾ ಶಾಖೆ ಇವರ ಸಹಯೋಗದಲ್ಲಿ 2025–26ನೇ ಸಾಲಿನ 'ಸರ್ಕಾರಿ ನೌಕರರ ಕ್ರೀಡಾ ಮತ್ತು ಸಾಂಸ್ಕೃತಿಕ ಹಬ್ಬ' ಗದಗ ಜಿಲ್ಲಾ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳ ಸಮಾರಂಭವನ್ನು ಉದ್ಘಾಟಿಸಿ, ಕ್ರೀಡಾ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಸರ್ಕಾರದ ಧ್ಯೇಯೋದ್ದೇಶಗಳನ್ನು ಸಾರ್ವಜನಿಕರಿಗೆ ತಲುಪಿಸುವಲ್ಲಿ ಸರ್ಕಾರಿ ನೌಕರರು ಕೊಂಡಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಸರ್ಕಾರಿ ನೌಕರರಿಗೆ ಈ ಕ್ರೀಡಾ ಉತ್ಸವವು ಒಂದು ಸಂತಸದ ಅವಕಾಶವನ್ನು ಕೊಟ್ಟಿದೆ. ಸಾಂಸ್ಕೃತಿಕ ಹಾಗೂ ಮನೋರಂಜನಾ ಕಾರ್ಯಕ್ರಮಗಳೂ ಸಹಿತ ನೌಕರರಿಗೆ ಮಾನಸಿಕ ಸದೃಢತೆ ತಂದುಕೊಡುತ್ತವೆ. ನಿರ್ಣಾಯಕರುಗಳ ನಿರ್ಣಯಗಳಿಗೆ ಬದ್ಧರಾಗಿ ನೌಕರರು ಕ್ರೀಡಾಕೂಟದಲ್ಲಿ ಪಾಲ್ಗೊಂಡು ಗದಗ ಜಿಲ್ಲೆಗೆ ಹೆಸರು ತರಬೇಕೆಂದು ತಿಳಿಸಿದರು.

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಮಾತನಾಡಿ, ನೌಕರರು ಕ್ರೀಡಾಕೂಟದಲ್ಲಿ ಪಾಲ್ಗೊಳ್ಳುವ ಮೂಲಕ ದೈಹಿಕ ಹಾಗೂ ಮಾನಸಿಕ ಸದೃಢತೆ ಹೊಂದಬೇಕು. ಜಿಲ್ಲೆಯ ಅನೇಕ ಕ್ರೀಡಾಪಟುಗಳು ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಖ್ಯಾತಿ ಗಳಿಸಿದ್ದಾರೆ ಎಂದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಡಾ. ಬಸವರಾಜ ವೆಂ.ಬಳ್ಳಾರಿ ಪ್ರಾಸ್ತಾವಿಕವಾಗಿ ಮಾತನಾಡಿ, ಗದಗ ಜಿಲ್ಲಾ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ನೌಕರರು ತಮ್ಮ ಕುಟುಂಬದವರೊಂದಿಗೆ ಆಗಮಿಸಿ ಕಾರ್ಯಕ್ರಮಗಳನ್ನು ಆಸ್ವಾದಿಸಬೇಕು. ಎಲ್ಲ ಕ್ರೀಡಾಪಟುಗಳು ಕ್ರೀಡಾಕೂಟದ ಸದುಪಯೋಗ ಪಡೆದುಕೊಳ್ಳಬೇಕೆಂದರು.

ಇದೇ ಸಂದರ್ಭದಲ್ಲಿ ವಿವಿಧ ಇಲಾಖೆಗಳಿಂದ ನಿರ್ಮಿಸಲಾದ ಮಳಿಗೆಗಳನ್ನು ಉದ್ಘಾಟಿಸಲಾಯಿತು. ಕಾರ್ಯಕ್ರಮದಲ್ಲಿ ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಎಸ್.ಎನ್. ಬಳ್ಳಾರಿ, ರಾಜು ಕುರಡಗಿ, ಪ್ರೇಮನಾಥ ಗರಗ, ರವಿ ಗುಂಜೀಕರ್, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಶಾಖೆಯ ಗೌರವಾಧ್ಯಕ್ಷ ಡಿ.ಎಸ್. ತಳವಾರ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಹಾಗೂ ತಾಲೂಕಾ ಘಟಕಗಳ ಅಧ್ಯಕ್ಷರು, ಉಪಾಧ್ಯಕ್ಷರು, ಪದಾಧಿಕಾರಿಗಳು, ಗಣ್ಯರು ಹಾಜರಿದ್ದರು.

ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ಸ್ವಾಗತಿಸಿದರು. ಎಂ.ಎಸ್. ಕುಚಬಾಳ ವಂದಿಸಿದರು. ಪ್ರೊ. ಬಾಹುಬಲಿ ಜೈನರ್ ಕಾರ್ಯಕ್ರಮ ನಿರೂಪಿಸಿದರು.

ಬ್ರೈಟ್ ಹಾರಿಝೋನ್ ಶಿಕ್ಷಣ ಸಂಸ್ಥೆಯ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ಅಭಿಮತ

# ಶಿಕ್ಷಣ ಸಂಸ್ಥೆಗಳು ದೇವಸ್ಥಾನ ಇದ್ದಂತೆ



ಗದಗ ಗ್ರಾಮೀಣ ಸಿಪಿಐ ಶಿದ್ದರಾಮೇಶ್ವರ ಗಡೇದ ಮಾತನಾಡಿ, ನಮ್ಮ ಕಾಲದಲ್ಲಿ ಕಿತ್ತು ತಿನ್ನುವ ಬಡತನವಿತ್ತು. ಕೂಲಿ–ನಾಲಿ ಮಾಡಿ ನಮ್ಮನ್ನು ಕಲಿಸಿದ ತಂದೆ–ತಾಯಿಗಳು, ಪ್ರೀತಿಯಿಂದ ಅಕ್ಷರಾಭ್ಯಾಸ ಮಾಡಿಸಿದ ಗುರುಗಳನ್ನು ನಾವು ಎಂದೂ ಮರೆಯಬಾರದು. ಇಂದು ಮಕ್ಕಳಿಗೆ ಪೋಷಕರು ಸಾಕಷ್ಟು ಸೌಲಭ್ಯಗಳನ್ನು ನೀಡುತ್ತಿದ್ದು, ಮಕ್ಕಳಿಗೆ ಕಷ್ಟದ ಅರಿವು ಮೂಡಿಸಬೇಕು. ಮಕ್ಕಳು ಗುರುಗಳನ್ನು, ಶಿಕ್ಷಣ ಸಂಸ್ಥೆಗಳನ್ನು ಗೌರವ, ಪ್ರೀತಿಯಿಂದ ಕಾಣಬೇಕು ಎಂದರು.

■ **ವಿಜಯಸಾಕ್ಷಿ ಸುದ್ದಿ, ಗದಗ**

ಶಿಕ್ಷಣ ಸಂಸ್ಥೆಯಲ್ಲಿ ಕಲಿಯುವ ಮಕ್ಕಳು ಸಾಕ್ಷಾತ್ ದೇವರು. ಸಂಸ್ಥೆಗಳು ದೇವಸ್ಥಾನ ಇದ್ದಂತೆ ಎಂದು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ಹೇಳಿದರು.

ಅವರು ಕಳಸಾಪೂರ ಗ್ರಾಮದ ಬ್ರೈಟ್ ಹಾರಿಝೋನ್ ಶಿಕ್ಷಣ ಸಂಸ್ಥೆಯ ವಾರ್ಷಿಕೋತ್ಸವ ಹಾಗೂ ಸ್ನೇಹ ಸಮ್ಮೇಳನ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಮಾತನಾಡುತ್ತಿದ್ದರು.

ದೇವಸ್ಥಾನಕ್ಕೆ ಹೋದರೆ ಒಂದು ದೇವರು ಕಾಣಲು ಸಾಧ್ಯ. ಆದರೆ ಶಿಕ್ಷಣ ಸಂಸ್ಥೆಯಲ್ಲಿ ಯಾವ ಜಾತಿ, ಮತ, ಭೇದ–ಭಾವವಿಲ್ಲದ, ನಿಷ್ಕಲ್ಮಶ ಮನಸ್ಸುಗಳ ಸಾಕ್ಷಾತ್ ದೇವರ ಸ್ವರೂಪದ ಮಕ್ಕಳನ್ನು ಕಾಣಬಹುದು., ಶಿಕ್ಷಕರು ಸಾಕ್ಷಾತ್ ದೇವರ ಸ್ವರೂಪವಾಗಿದ್ದು, ಶಿಕ್ಷಕರನ್ನು ಗೌರವದಿಂದ ಕಾಣಬೇಕು. ಮಕ್ಕಳಿಗೆ ಪಠ್ಯದ ಜೊತೆಯಲ್ಲಿ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಲು ಪಾಲಕರು, ಶಿಕ್ಷಕರು ಪ್ರೋತ್ಸಾಹಿಸಿ ಮಕ್ಕಳ ಭವಿಷ್ಯಕ್ಕೆ ಸಹಕರಿಸಬೇಕು. ಬಿ.ಡಿ. ಹರ್ತಿ ನಿವೃತ್ತರಾದ ತಕ್ಷಣ ಶಿಕ್ಷಣ ಸಂಸ್ಥೆ ತೆರೆಯುವ ಮೂಲಕ ಗ್ರಾಮೀಣ ಮಟ್ಟದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಲೆಂದು ಶ್ರಮಿಸುತ್ತಿರುವ ಬ್ರೈಟ್ ಹಾರಿಝೋನ್ ಸಂಸ್ಥೆಯ ಕಾರ್ಯ ಶ್ಲಾಘನೀಯ ಎಂದರು.

ಕೆ.ಎಚ್. ಬೇಲೂರ ಮಾತನಾಡಿ, ಮಕ್ಕಳು ಪೋಷಕರನ್ನು ನೋಡಿ ಸಾಕಷ್ಟು ಕಲಿಯುತ್ತಾರೆ. ಅದರ ಬಗ್ಗೆ ನಮನವಿಟ್ಟು ಪಾಲಕರು ಮನೆಯಲ್ಲಿ ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡಿದಲ್ಲಿ ಉತ್ತಮ ಶಿಕ್ಷಣವಂತರಾಗಲು ಸಾಧ್ಯವಾಗುತ್ತದೆ. ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿನ ಶಿಕ್ಷಣವನ್ನು ಸರಿಯಾಗಿ ಪಡೆದುಕೊಂಡಲ್ಲಿ ಭವಿಷ್ಯದ ಉತ್ತಮ ಪ್ರಜೆಗಳಾಗಿ ಹೊರಹೊಮ್ಮಲು ಸಾಧ್ಯವಿದೆ ಎಂದರು.

ಅಧ್ಯಕ್ಷತೆಯನ್ನು ಬಿ.ಎಂ. ಪಾಟೀಲ ವಹಿಸಿದ್ದರು. ಬಿಇಓ ವಿ.ವಿ. ನಡುವಿನಮನಿ, ಐ.ಬಿ. ಬೆನಕೊಪ್ಪ, ಬಿ.ಡಿ. ಹರ್ತಿ, ತೇಜಸ್ವಿನಿ ಹಟ್ಟಿ, ಎಚ್.ಎನ್. ಗದಗ, ವಾಯ್.ಎನ್. ಭರಮಗೌಡರ, ಎಸ್.ಎನ್. ಗದಗ, ಎಂ.ಎನ್. ದೇಸಾಯಿ, ಶ್ರೇಯಾ ಮಲ್ಲೂರ, ವೈಷ್ಣವಿ ರಾಠೋಡ, ಗಣೇಶ ಕೆಂಚಣ್ಣವರ, ಹರ್ಷಿತಾ ಅಕ್ಕಮ್ಮನವರ ಮುಂತಾದವರಿದ್ದರು.

# ಲಾರಿ ಪಲ್ಟಿ; ತಪ್ಪಿದ ಅನಾಹುತ



■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಹರದಗಟ್ಟಿ ಗ್ರಾಮದ ಹೊರವಲಯದಲ್ಲಿ ಲಕ್ಷ್ಮೇಶ್ವರ ಕಡೆಗೆ ಬರುತ್ತಿದ್ದ ಮೆಕ್ಕೆಜೋಳ ತುಂಬಿದ ಲಾರಿಯೊಂದು ಚಾಲಕನ ನಿಯಂತ್ರಣ ತಪ್ಪಿ ಪಲ್ಟಿಯಾಗಿರುವ ಘಟನೆ ಶನಿವಾರ ಮುಂಜಾನೆ ಸಂಭವಿಸಿದೆ.

ಹರದಗಟ್ಟಿ ಗ್ರಾಮದದಿಂದ ರೈತರ ಮೆಕ್ಕೆಜೋಳ ಖರೀದಿಸಿ ಲಾರಿಯಲ್ಲಿ ತುಂಬಿಕೊಂಡು ಸಾಗಿಸುತ್ತಿದ್ದ ವೇಳೆ ಲಕ್ಷ್ಮೇಶ್ವರ ಪಟ್ಟಣಕ್ಕೆ ಹೋಗುವ ರಸ್ತೆಯಲ್ಲಿನ ಕೆಂಪಿಗೆರೆ ಬಳಿ ಅಪಘಾತ ಸಂಭವಿಸಿದೆ. ಸಣ್ಣಪುಟ್ಟ ಗಾಯಗಳೊಂದಿಗೆ ಲಾರಿ ಚಾಲಕ ದೊಡ್ಡ ಅನಾಹುತದಿಂದ ಪಾರಾಗಿದ್ದಾನೆ. ಲಾರಿಯಲ್ಲಿ ಸುಮಾರು 100 ಕ್ವಿಂಟಲ್ ಮೆಕ್ಕೆಜೋಳದ ಚೀಲಗಳು ಇದ್ದವು ಎಂದು ತಿಳಿದುಬಂದಿದ್ದು, ಪಲ್ಟಿಯಾದ ಲಾರಿಯಿಂದ ಮೆಕ್ಕೆಜೋಳ ತುಂಬಿದ್ದ ಚೀಲಗಳು ಚೆಲ್ಲಾಪಿಲ್ಲಿಯಾಗಿ ಬಿದ್ದು, ಕಾಳುಗಳು ರಸ್ತೆಯ ತುಂಬೆಲ್ಲ ಹರಡಿದ್ದವು.

ಇದೇ ರಸ್ತೆಯಲ್ಲಿ ಈ ಹಿಂದೆ ಹಲವಾರು ವಾಹನಗಳು ಅಪಘಾತಕ್ಕೆ ಈಡಾಗಿದ್ದು, ಇಲ್ಲಿ ತಿರುವು ಇರುವುದರಿಂದ ಅಪಘಾತಕ್ಕೆ ಕಾರಣವಾಗಿದೆ. ಈ ಅಪಾಯಕಾರಿ ತಿರುವನ್ನು ಸಂಬಂಧಪಟ್ಟ ಅಧಿಕಾರಿಗಳು ಸರಿಪಡಿಸದಿರುವದರಿಂದ ಅನೇಕ ಅವಘಡಗಳು ಸಂಭವಿಸುವಂತಾಗಿದೆ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದರು.

ಕೆಸಿಸಿ ಬ್ಯಾಂಕ್‌ನ ಆರ್ಥಿಕ, ಡಿಜಿಟಲ್ ಸೇವಾ ಸೌಲಭ್ಯಗಳ ಕುರಿತು ತಿಳುವಳಿಕೆ ಕಾರ್ಯಾಗಾರ

# ಸಹಕಾರಿ ಬ್ಯಾಂಕುಗಳಿಂದ ಗ್ರಾಮಗಳ ಆರ್ಥಿಕ ವಿಕಾಸ



ಗ್ರಾ.ಪಂ ಸದಸ್ಯ ಮರಿಯಪ್ಪ ಸಿದ್ಧಣ್ಣವರ, ಜಿ.ಪಂ ಮಾಜಿ ಸದಸ್ಯ ಶಿವಪ್ಪ ಅಂಕದ ಮಾತನಾಡಿ, ಕೆಸಿಸಿ ಬ್ಯಾಂಕ್ ರೈತರ ಬ್ಯಾಂಕ್ ಆಗಿದೆ. ಈ ಭಾಗದಲ್ಲಿ 10 ವರ್ಷದಿಂದ ಬಂದಾಗಿದ್ದ ಸ್ವ–ಸಹಾಯ ಸಂಘಗಳಿಗೆ ಮರುಜೀವ ನೀಡಿದ ಮತ್ತು ಈ ಭಾಗದ ರೈತರು ಆರ್ಥಿಕ ಪ್ರವಾಹಿನಿಗೆ ಬರಬೇಕೆಂದು ಶ್ರಮಿಸುತ್ತಿರುವ ಶಿವಕುಮಾರಗೌಡ ಎಸ್.ಪಾಟೀಲರ ಕಾರ್ಯ ಪ್ರಶಂಸನೀಯ ಎಂದು ಹೇಳಿದರು.

■ **ವಿಜಯಸಾಕ್ಷಿ ಸುದ್ದಿ, ಡಂಬಳ**

ರಾಷ್ಟ್ರಾದ್ಯಂತ ಸಹಕಾರಿ ಬ್ಯಾಂಕುಗಳು ಗ್ರಾಮೀಣ ಜನತೆಯನ್ನು ಆರ್ಥಿಕವಾಗಿ ಬಲಿಷ್ಠಗೊಳಿಸುವಲ್ಲಿ ಅತ್ಯಂತ ಮಹತ್ವದ್ದ ಪಾತ್ರ ವಹಿಸಿಕೊಂಡಿವೆ ಎಂದು ಧಾರವಾಡ ಕೆ.ಸಿ.ಸಿ ಬ್ಯಾಂಕ್‌ನ ಅಧ್ಯಕ್ಷ ಶಿವಕುಮಾರಗೌಡ ಎಸ್.ಪಾಟೀಲ ಹೇಳಿದರು.

ಡಂಬಳ ಗ್ರಾಮದ ಕೆ.ಸಿ.ಸಿ ಬ್ಯಾಂಕ್‌ನಲ್ಲಿ ನಬಾರ್ಡ್ ಸಹಯೋಗದೊಂದಿಗೆ ಆರ್ಥಿಕ ಸಾಕ್ಷರತಾ ಯೋಜನೆಯಡಿಯಲ್ಲಿ ಬ್ಯಾಂಕಿನ ಆರ್ಥಿಕ ಹಾಗೂ ಡಿಜಿಟಲ್ ಸೇವಾ ಸೌಲಭ್ಯಗಳ ಬಗ್ಗೆ ತಿಳುವಳಿಕೆ ಕಾರ್ಯಾಗಾರದ ಅಧ್ಯಕ್ಷತೆ ವಹಿಸಿ, ಕ್ಯಾಲೆಂಡರ್ ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ಗ್ರಾಮೀಣ ಜನತೆ ಆರ್ಥಿಕ ಮುನ್ನೆಲೆಗೆ ಬರಬೇಕು ಎನ್ನುವ ಉದ್ದೇಶದಿಂದ ಕೆ.ಸಿ.ಸಿ ಬ್ಯಾಂಕ್ ಮೂಲಕ ರೈತರಿಗೆ, ಕಾರ್ಮಿಕರಿಗೆ, ಮಹಿಳೆಯರಿಗೆ 800 ಕೋಟಿ ರೂ ಸಾಲ ಸೌಲಭ್ಯ ನೀಡಲಾಗಿದೆ. ನನ್ನ ಅಧ್ಯಕ್ಷತೆಯಲ್ಲಿ 15 ನೂತನ ಶಾಖೆಗಳನ್ನು ತೆರೆಯಲಾಗಿದೆ. 3 ಸಾವಿರಕ್ಕೂ ಹೆಚ್ಚು ಟ್ರ್ಯಾಕ್ಟರ್ ಖರೀದಿ ಸಾಲ ನೀಡಲಾಗಿದೆ. ಶೇ. 3ರಷ್ಟು ಬಡ್ಡಿ ದರದಲ್ಲಿ ತೋಟಗಾರಿಕಾ ಬೆಳೆಗಳಿಗೆ ಸೋಲಾರ್ ಪಂಪ್‌ಸೆಟ್ ವಿತರಣೆ ಮಾಡಲಾಗುವುದು. ಮಾಜಿ ಮುಖ್ಯಮಂತ್ರಿ, ಸಂಸದರಾದ ಬಸವರಾಜ ಬೊಮ್ಮಾಯಿ ಅವರು ಗದಗ ಭಾಗಕ್ಕೆ ಕೇಂದ್ರ ಸರ್ಕಾರದ ಎ.ಐ ಹಬ್ ಸೌಲಭ್ಯಕ್ಕೆ ಮಾನ್ಯತೆ ಕೊಡಿಸಿದ್ದಾರೆ. ಇದರಿಂದ ಈ ಭಾಗದ ಜನತೆಗೆ ಅನೂಕೂಲತೆಗಳು

▶▶ 2ನೇ ಪುಟಕ್ಕೆ

ಶ್ರೀ ಚನ್ನಬಸವೇಶ್ವರರ 42ನೇ, ಶ್ರೀ ಶಿವಬಸವ ಸ್ವಾಮಿಗಳ 10ನೇ ಪುಣ್ಯಸ್ಮರಣೋತ್ಸವ ಕಾರ್ಯಕ್ರಮ

# ನಿಡಗುಂದಿಕೊಪ್ಪದ ಮಠ ಆರೋಗ್ಯ ದಾಸೋಹಕ್ಕೆ ಹೆಸರುವಾಸಿ



■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಈ ನಾಡಿನ ಅನೇಕ ಮಠಗಳು ಅನ್ನ, ಅಕ್ಷರ, ದಾಸೋಹಕ್ಕೆ ಹೆಸರಾಗಿದ್ದರೆ, ನಿಡಗುಂದಿಕೊಪ್ಪದ ಶ್ರೀಮಠವು ಆರೋಗ್ಯ ದಾಸೋಹಕ್ಕೆ ಹೆಸರಾಗಿದೆ ಎಂದು ಹಾಲಕೆರೆಯ ಶ್ರೀ ಮುಪ್ಪಿನ ಬಸವಲಿಂಗ ಸ್ವಾಮೀಜಿ ಹೇಳಿದರು.

ಸಮೀಪದ ನಿಡಗುಂದಿಕೊಪ್ಪದಲ್ಲಿ ಶನಿವಾರ ಜರುಗಿದ ಶ್ರೀ ಚನ್ನಬಸವೇಶ್ವರರ 42ನೇ ಮತ್ತು ಶ್ರೀ ಶಿವಬಸವ ಸ್ವಾಮಿಗಳ 10ನೇ ಪುಣ್ಯಸ್ಮರಣೋತ್ಸವದ ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಪೀಠಾಧಿಪತಿಗಳಾದ ಅಭಿನವ ಚನ್ನಬಸವ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ಇನ್ನು ಕೆಲವೇ ದಿನಗಳಲ್ಲಿ ಶ್ರೀಮಠದಿಂದ ಚನ್ನಚೇತನ ಗುರುಕುಲ ಶಾಲೆ ಪ್ರಾರಂಭವಾಗಲಿದೆ. ಇಲ್ಲಿ 90 ದಿನಗಳ ಉಚಿತ ಹೊಲಿಗೆ ತರಬೇತಿಯೂ ನಡೆಯುತ್ತಿದೆ. ಈ ಎಲ್ಲದರ ಪ್ರಯೋಜವವನ್ನು ಆಸಕ್ತರು ಪಡೆದುಕೊಳ್ಳಬೇಕೆಂದರು.

ಈ ಮಠವನ್ನು ಸ್ಥಾಪಿಸಿದ ಹಾನಗಲ್ಲ ಗುರು ಕುಮಾರೇಶ್ವರರು ಈ ಭಾಗದ ಜನರ ಆರೋಗ್ಯವನ್ನು ಕಾಪಾಡಲೆಂದೇ ಶ್ರೀ ಚನ್ನಬಸವ ಮಹಾಸ್ವಾಮಿಗಳಿಗೆ ಅನುಗ್ರಹಿಸಿ ಶಿವಯೋಗ ಮಂದಿರದಿಂದ ಇಲ್ಲಿಗೆ ತಂದಿರಿಸಿದರು. ಅವರಿಂದ ಈ ಮಠವು ಆರೋಗ್ಯ ದಾಸೋಹಿ ಮಠವೆಂಬ ಅಭಿದಾನವನ್ನು ಪಡೆದು ಇಂದಿಗೂ ಆ ಸೇವೆಯನ್ನು ಮುಂದುವರೆಸಿಕೊಂಡು ಬಂದಿದೆ. ಇದನ್ನೇ ಈ ಹಿಂದಿನ ಪೀಠಾಧಿಪತಿಗಳಾಗಿದ್ದ ಶ್ರೀ ಶಿವಬಸವ ಮಹಾಸ್ವಾಮಿಗಳು ಮುನ್ನಡೆಸಿಕೊಂಡು ಬಂದು ಮಠದ ಕೀರ್ತಿಯನ್ನು ಬೆಳೆಸಿದರು ಎಂದರು.

ಅಕ್ಕಿಆಲೂರಿನ ಶ್ರೀ ಶಿವಬಸವ ಸ್ವಾಮಿಗಳು ಆಶೀರ್ವಚನ ನೀಡಿ, ಈ ಮಠಕ್ಕೆ ತನ್ನದೇ ಆದ ಮಹತ್ವವಿದೆ. ಶ್ರೀಗುರು ಕುಮಾರೇಶ್ವರರು


▶▶ 3ನೇ ಪುಟಕ್ಕೆ

# ಐಎಂಎ ರಾಷ್ಟ್ರೀಯ ಸಮ್ಮೇಳನದಲ್ಲಿ ಡಾ.ರಾಜಶೇಖರ ಬಳ್ಳಾರಿಗೆ ಗೌರವ ಪ್ರಶಸ್ತಿ

■ **ವಿಜಯಸಾಕ್ಷಿ ಸುದ್ದಿ, ಗದಗ**

ಗದುಗಿನ ಹಿರಿಯ ತಜ್ಞ ವೈದ್ಯರು, ಗದಗ ಐಎಂಎ ಹಿರಿಯ ಸದಸ್ಯರೂ ಆದ ಡಾ. ರಾಜಶೇಖರ ಬಳ್ಳಾರಿ ಅವರ ವೈದ್ಯಕೀಯ ಹಾಗೂ ಸಮಾಜಮುಖಿ ಕಾರ್ಯಗಳನ್ನು ಪ್ರಶಂಸಿಸಿ ಐ.ಎಂ.ಎ ಕೇಂದ್ರದ ರಾಷ್ಟ್ರೀಯ ಅಧ್ಯಕ್ಷ ಡಾ. ದಿಲೀಪ ಭಾನುಸಾಲಿ ಪ್ರಶಂಸನಾ ಪ್ರಶಸ್ತಿ ನೀಡಿದ್ದಾರೆ.

ಡಾ. ರಾಜಶೇಖರ ಬಳ್ಳಾರಿ ಅವರು ಕಳೆದ 45 ವರ್ಷಗಳಿಂದ ಐಎಂಎ ಆಜೀವ ಸದಸ್ಯರಾಗಿ, ಐಎಂಎ ಗದಗ ಜಿಲ್ಲಾ, ರಾಜ್ಯ ಘಟಕದ ಅಧ್ಯಕ್ಷರಾಗಿ, ಕಳೆದ 26 ವರ್ಷಗಳಿಂದ ನವದೆಹಲಿಯ ರಾಷ್ಟ್ರೀಯ ಐಎಂಎ ಕೇಂದ್ರ ಕಾರ್ಯಕಾರಿಣಿ ಸದಸ್ಯರಾಗಿ, ಕಳೆದ ನಾಲ್ಕು ವರ್ಷಗಳಿಂದ ಐಎಂಎ ಕೇಂದ್ರ ಹಣಕಾಸು ಸಮಿತಿಯ ಸದಸ್ಯ ಸೇರಿದಂತೆ ಅನೇಕ ಹುದ್ದೆಗಳಲ್ಲಿ ಅನುಪಮ ಸೇವೆ ಸಲ್ಲಿಸುತ್ತಾ ಬಂದಿದ್ದಾರೆ.



ಕಳೆದ 40 ವರ್ಷಗಳಿಂದ ರೋಟರಿ ಕ್ಲಬ್ ಕ್ಲಬ್‌ನ ಸದಸ್ಯರಾಗಿ, ಅಧ್ಯಕ್ಷರಾಗಿ ಜನಮುಖಿ, ಸಮಾಜಮುಖಿ ಕಾರ್ಯಗಳನ್ನು ಮಾಡುತ್ತ ಬಂದಿರುವ ಡಾ. ಬಳ್ಳಾರಿ ಅವರು ಪತ್ರಿಕೆ, ನಿಯತಕಾಲಿಕೆಗಳಲ್ಲಿ ವೈದ್ಯಕೀಯ ಹಾಗೂ ವೈಚಾರಿಕ ಲೇಖನಗಳ ಮೂಲಕ ಜಾಗೃತಿ ಮೂಡಿಸುತ್ತಿದ್ದಾರೆ. ಈ ಎಲ್ಲ ಅಂಶಗಳನ್ನು ಅವಲೋಕಿಸಿ ಇತ್ತೀಚೆಗೆ ಅಲಹಾಬಾದ್‌ದಲ್ಲಿ ಜರುಗಿದ ಐಎಂಎ ರಾಷ್ಟ್ರೀಯ ಸಮ್ಮೇಳನದಲ್ಲಿ ಗೌರವದ ಈ ಪ್ರಶಂಸನಾ ಪತ್ರ ನೀಡಲಾಗಿದೆ.

ಡಾ.ರಾಜಶೇಖರ ಬಳ್ಳಾರಿ ಅವರಿಗೆ ರಾಜ್ಯ, ಜಿಲ್ಲಾ ಐಎಂಎ, ರೋಟರಿ ಸದಸ್ಯರು

# ನಿಡಗುಂದಿಕೊಪ್ಪದ ಮಠ ಆರೋಗ್ಯ ದಾಸೋಹಕ್ಕೆ ಹೆಸರುವಾಸಿ

▶▶ ಮೊದಲನೇ ಪುಟದಿಂದ

ಹೆಚ್ಚಿಗೆ ಭೇಟಿ ನೀಡಿದ ಗ್ರಾಮವಿದು. ತಪಸ್ಸಿನ ಶಕ್ತಿ ಮತ್ತು ಭಕ್ತರ ಗೆದ್ದ ಮಠಗಳು ನಿಜವಾದ ಶ್ರೀಮಂತ ಮಠಗಳು. ಈ ಮಠ ಅಂತಹ ಮಠಗಳಲ್ಲೊಂದಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ರೋಣ ಗುಲಗಂಜಿ ಮಠದ ಶ್ರೀ ಗುರುಪಾದ ಸ್ವಾಮೀಜಿ ಆಶೀರ್ವಚನ ನೀಡಿ, ಚನ್ನಬಸವ ಮಹಾಸ್ವಾಮಿಗಳು ಕಾಮಧೇನು, ಕಲ್ಪವೃಕ್ಷವಾಗಿದ್ದರು. ಅನ್ನ ಪ್ರಸಾದಕ್ಕಿರುವಷ್ಟೇ ಮಹತ್ವ ಜ್ಞಾನ ಪ್ರಸಾದಕ್ಕಿದೆ. ಅದಕ್ಕೂ ಮಿಗಿಲಾದದ್ದು ಆರೋಗ್ಯ ಪ್ರಸಾದ.

ಅದನ್ನು ಈ ಮಠ ನೀಡಿ ಜನಮಾನಸದಲ್ಲಿ ಆರೋಗ್ಯದ ಮಠವೆಂದು ಪ್ರಸಿದ್ಧಿಯನ್ನು ಪಡೆದಿದೆ. ಜಾತ್ರಾಮಹೋತ್ಸವದಲ್ಲಿ ನಿವೃತ್ತ ಸೈನಿಕರನ್ನು ಸನ್ಮಾನಿಸುತ್ತಿರುವುದ ಶ್ಲಾಘನೀಯ. ಜಾತ್ರೆಗಳಲ್ಲಿ ಕಲೆ, ಸಾಹಿತ್ಯ, ಸಂಗೀತಗಳಿಗೆ ಹೆಚ್ಚಿನ ಮಹತ್ವ ನೀಡಬೇಕು.

ಅದಕ್ಕೆ ಈ ಮಠ ಹೆಸರುವಾಸಿಯಾಗಿದೆ. ಏಕೆಂದರೆ ಇಲ್ಲಿ ಹಾನಗಲ್ಲ ಕುಮಾರೇಶ್ವರರ ಮತ್ತು ಪಂ. ಪಂಚಾಕ್ಷರ ಗವಾಯಿಗಳವರ ಕೃಪೆ ಇದೆ ಎಂದರು.

ತಾಲೂಕಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಮಿಥುನ ಪಾಟೀಲ ಮಾತನಾಡಿದರು. ಮುಖಂಡ ವೀರಣ್ಣ ಶೆಟ್ಟರ ವೇದಿಕೆಯ ಮೇಲಿದ್ದರು. ದ್ಯಾಮಣ್ಣ ಮಾಸ್ತರ, ಅನ್ನಪೂರ್ಣಾ ಮನ್ನಾಪೂರ, ಗೀತಾ ಭೋಪಳಾಪೂರ ಮತ್ತು ಸಂಗಡಿಗರಿಂದ ಸಂಗೀತ ಸೇವೆ ಜರುಗಿತು. ಶಿಕ್ಷಕ ಆರ್.ವಿ. ಬೆಲ್ಲದ ನಿರೂಪಿಸಿದರು. ಎಸ್.ಎಸ್. ಹಿರೇಮಠ ಆಶಯ ನುಡಿಗಳನ್ನಾಡಿದರು.

---

### ಲಿಂಗಾಯತ ಪ್ರಗತಿಶೀಲ ಸಂಘದ ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು

# ಮನುಷ್ಯರನ್ನು ಪ್ರೀತಿಸುವುದೇ ಮನುಷ್ಯತ್ವ

■ ವಿಜಯಸಾಕ್ಷಿ ಸುದ್ದಿ, ಗದಗ

ಮಾನವನನ್ನು ಮಾನವನನ್ನಾಗಿ ಕಾಣಬೇಕು. ಮನುಷ್ಯರನ್ನು ಪ್ರೀತಿಸುವುದೇ ಮನುಷ್ಯತ್ವ. ಚಂದ್ರಲೋಕ ಸಮೀಪವಾಗಿದೆ. ಮನುಷ್ಯರ ಮನಸ್ಸುಗಳು ದೂರವಾಗುತ್ತಿವೆ ಎಂದು ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ನುಡಿದರು.



ಲಿಂಗಾಯತ ಪ್ರಗತಿಶೀಲ ಸಂಘದ 2778ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಶ್ರೀಗಳು, ಕುವೆಂಪುರವರಿಗೆ ನಾಡು-ನುಡಿಯ ಬಗ್ಗೆ ಅಪಾರವಾದ ಪ್ರೀತಿ ಇತ್ತು. ವೈಜ್ಞಾನಿಕ ಪ್ರಜ್ಞೆಯನ್ನು ಬೆಳೆಸಿದವರು ಕುವೆಂಪು. ಕೇವಲ 20ನೇ ವಯಸ್ಸಿನಲ್ಲಿ ನಾಡಗೀತೆಯನ್ನು ಬರೆದರು. ಕುವೆಂಪು ನಿಸರ್ಗದ ಕವಿ. ಭಾವದ ಐಸಿರಿ, ಭಾವದ ರಸ ಪ್ರವಾಹ, ಕಾವ್ಯಾಲಂಕಾರ, ಉಕ್ತಿ ಚಮತ್ಕಾರಗಳ ವೈಭವವು ಸಹೃದಯಿಗಳನ್ನು ರೋಮಾಂಚನಗೊಳಿಸುತ್ತದೆ ಎಂದರು.

ವಿದುಷಿ ಪ್ರಭಾವತಿ ಇನಾಮದಾರ, ಸಂಗೀತ ಶಿಕ್ಷಕಿ, ಕೆ.ಎಲ್.ಇ ಪ್ರೌಢಶಾಲೆ ಬೆಂಗಳೂರು ಇವರು ಸಂಗೀತ ಸೇವೆಯನ್ನು ನಡೆಸಿಕೊಟ್ಟರು. ವಚನ ಸಂಗೀತ ಸೇವೆಯನ್ನು ಗುರುನಾಥ್ ಸುತಾರ ಹಾಗೂ ಮೃತ್ಯುಂಜಯ ಹಿರೇಮಠ ನೆಡೆಸಿದರು. ಧರ್ಮಗ್ರಂಥ ಪಠಣವನ್ನು ಗೌರಿ ಎಸ್.ಬಳಿಗೇರ ಹಾಗೂ ವಚನ ಚಿಂತನವನ್ನು ನಿಧಿ ಮಹಾಂತ ಕಟ್ಟಿಮನಿ ಇವರು ಪ್ರಸ್ತುತಪಡಿಸಿದರು.

ದಾಸೋಹ ಸೇವೆಯನ್ನು ಅವಿನಾಶ್ ಮತ್ತು ಅಭಿಲಾಷ ಅವರ ಹುಟ್ಟುಹಬ್ಬದ ಪ್ರಯುಕ್ತ ವಿದ್ಯಾ ಪ್ರಭು ಗಂಜಿಹಾಳ ಹಾಗೂ ಕುಟುಂಬ ವರ್ಗದವರು ಗದಗ, ಗುರುಪಾದ ಪರಪ್ಪ ಕಟ್ಟಿಮನಿ ಹಾಗೂ ಕುಟುಂಬ ವರ್ಗದವರು ಗದಗ, ಪ್ರಮೀಳಾ ಬಾಯಿ ಮಾಲಿಪಾಟೀಲ ಇಟಗಿ ಹಾಗೂ ಶಿವಪ್ಪ ತಿಮ್ಮಪ್ಪ ಯರಾಶಿ ಬನ್ನಿಕೊಪ್ಪ ಇವರುಗಳು ವಹಿಸಿಕೊಂಡಿದ್ದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಡಾ. ಉಮೇಶ ಪುರದ, ವಿದ್ಯಾ ಪ್ರಭು ಗಂಜಿಹಾಳ ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹಕಾರ್ಯದರ್ಶಿ ಸೋಮನಾಥ ಪುರಾಣಿಕ, ನಾಗರಾಜ್ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ್ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಶಿವಾನುಭವ ಸಮಿತಿಯ ಚೇರಮನ್ ಐ.ಬಿ. ಬೆನಕೊಪ್ಪ, ಸಹ ಚೇರಮನ್ ಶಿವಾನಂದ ಹೊಂಬಳ ಹಾಗೂ ಶ್ರೀಮಠದ ಭಕ್ತರು ಉಪಸ್ಥಿತರಿದ್ದರು.

ಮಹೇಶ ಗಾಣಿಗೇರ ಸ್ವಾಗತಿಸಿದರು, ವಿದ್ಯಾ ಪ್ರಭು ಗಂಜಿಹಾಳ ಕಾರ್ಯಕ್ರಮ ನಿರೂಪಿಸಿದರು.

ಉಪನ್ಯಾಸಕರಾಗಿ ಆಗಮಿಸಿದ ವಾಣಿಜ್ಯ ತೆರಿಗೆ ಇಲಾಖೆಯ ನಿವೃತ್ತ ಉಪಆಯುಕ್ತರಾದ ಗೋವಿಂದಪ್ಪ ಗೌಡಪ್ಪಗೋಳ ವಿಶ್ವಮಾನವ ದಿನಾಚರಣೆ ಕುರಿತು ಮಾತನಾಡುತ್ತಾ, ಶಿವಾನುಭವ ಶಿವನಲ್ಲಿ ಒಂದಾಗುವ ಪರಿ. ಶಿವನ ಅನುಭವ ಪಡೆಯುವ ಪವಿತ್ರ ವೇದಿಕೆ.

ಇಲ್ಲಿ ಕುವೆಂಪು ಜನ್ಮದಿನದ ಪ್ರಯುಕ್ತ ವಿಶ್ವಮಾನವ ದಿನಾಚರಣೆ ಆಚರಿಸುವುದು ಸ್ತುತ್ಯ. ಕನ್ನಡಕ್ಕೆ ಕುವೆಂಪು ವಿಶ್ವಮಾನ್ಯತೆ ತಂದು ಕೊಟ್ಟರು.

ಕನ್ನಡ ಸರಸ್ವತಿಯ ಕಿರೀಟದ ರತ್ನ ಬಸವಣ್ಣ ಎಂದವರು. ಪ್ರಕೃತಿಯ ಆರಾಧನೆ ಮಾಡಿ ಅಲ್ಲಿ ದೇವರಿದ್ದಾನೆ ಎನ್ನುತ್ತಾ ಪ್ರಕೃತಿ ಪ್ರೇಮದ ಮೂಲಕ ವಿಶ್ವಮಾನವ ಪ್ರಜ್ಞೆ ಸಾರಿದವರು. ಸರ್ವೋದಯ, ಸಮನ್ವಯ, ಪೂರ್ಣದೃಷ್ಟಿ, ಈ ಮೂರು ಸಂದೇಶಗಳನ್ನು ಕೊಟ್ಟರು ಎಂದರು.

---

# ಜಿ.ಪಿ.ಎಲ್. ಆವೃತ್ತಿ-3 ಗದಗ ವಲ್ಚರ್ಸ್ ತಂಡ ಚಾಂಪಿಯನ್




■ ವಿಜಯಸಾಕ್ಷಿ ಸುದ್ದಿ, ಗದಗ

ಜಿ.ಪಿ.ಎಲ್ 3ನೇ ಆವೃತ್ತಿಯ ಫೈನಲ್ ಪಂದ್ಯ ಗದಗ ವಲ್ಚರ್ಸ್ ಹಾಗೂ ಗದಗ ಸ್ಟ್ರೈಕರ್ಸ ನಡುವೆ ನಡೆಯಿತು. ಈ ಪಂದ್ಯದ ಮುಖ್ಯ ಅತಿಥಿಗಳಾಗಿ ಆದರ್ಶ ಶಿಕ್ಷಣ ಸಮಿತಿ ಕಾಲೇಜಿನ ಚೇರಮನ್ ಆನಂದ ಪೋತ್ನಿಸ್ ಮತ್ತು ಯುವ ಕಾಂಗ್ರೆಸ್ ಮುಖಂಡ ಕೃಷ್ಣಗೌಡ ಪಾಟೀಲ ಆಗಮಿಸಿದ್ದರು.

ಹರೀಶ ಕೊಪ್ಪರ, ಶೈಲೇಶ ಬಾಗಮಾರ, ಚಿದಾನಂದ ಕ್ಷತ್ರಿಯ, ಶೈಲೇಶ, ಶಬ್ಬೀರ ನರೇಗಲ್, ಸಚಿನ ನಾಯ್ಕ, ಅಹ್ಮದಖಾಜಿ, ಜಗನ್ನಾಥ ಚಾಗಿ, ತಾಹೀರ ಉಮಚಗಿ, ಸಮೀರ ನದಿಮುಲ್ಲಾ ಮತ್ತು ಫೈಜಾನ ಇರಕಲ್ ಇವರು ಪ್ರಶಸ್ತಿ ವಿತರಣಾ ಸಮಾರಂಭದಲ್ಲಿ ಪಾಲ್ಗೊಂಡಿದ್ದರು.

ಗದಗ ವಲ್ಚರ್ಸ್ ತಂಡ ಟಾಸ್ ಗೆದ್ದು ಮೊದಲು ಬ್ಯಾಟ್ ಮಾಡಿತು. ನಿಗದಿತ 20 ಓವರ್‌ಗಳಲ್ಲಿ 3 ವಿಕೆಟ್ ನಷ್ಟಕ್ಕೆ 237 ರನ್ ಗಳಿಸಿತು. ಗದಗ ವಲ್ಚರ್ಸ್ ತಂಡದ ಓಪನರ್‌ಗಳಾದ ವಿನಯ ಬಾರಕೇರ 91 ಮತ್ತು ಪವನ ಶಳ್ಳೇದ 116 ರನ್‌ಗಳ ಆಟ ಪಂದ್ಯಾಟಕ್ಕೆ ವೇಗ ನೀಡಿತು.

ಎರಡನೇ ಇನ್ನಿಂಗ್ಸ್ ಆರಂಭಿಸಿದ ಗದಗ ಸ್ಟ್ರೈಕರ್ಸ್‌ನ ಓಪನರ್‌ಗಳಾದ ಜೈದ ಅತ್ತಾರ ಮತ್ತು ರವಿ ರಾಮಗಿರಿ ಭರ್ಜರಿ ಬ್ಯಾಟಿಂಗ್ ಮಾಡುವ ಮೂಲಕ ಪ್ರೇಕ್ಷಕರಿಗೆ ರಸದೌತಣ ನೀಡಿದರು. ಜೈದ ಅತ್ತಾರ 73, ರವಿ ರಾಮಗಿರಿ 33, ಕಿಶೋರ 18 ರನ್ ಮಾಡಿ 20 ಓವರ್‌ಗೆ 6 ವಿಕೆಟ್ ಕಳೆದುಕೊಂಡು 173 ರನ್ ಮಾಡಿ 63 ರನ್‌ಗಳ ಅಂತರದಿಂದ ಸೋಲನ್ನು ಅನುಭವಿಸಿತು.

ಪಂದ್ಯ ಪುರಷೋತ್ತಮ ಪ್ರಶಸ್ತಿ ವಿನಯ ಬಾರಕೇರ ಪಡೆದರು. ಪಂದ್ಯಶ್ರೇಷ್ಠ ಪ್ರಶಸ್ತಿ ಜೈದ ಅತ್ತಾರ, ಉತ್ತಮ ಬ್ಯಾಟ್ಸಮನ್ ವಿನಯ ಬಾರಕೇರ, ಉತ್ತಮ ಬೌಲರ್ ಕಾರ್ತಿಕ ಬಾಗಲಕೋಟೆ, ಉತ್ತಮ ಕ್ಯಾಚ್ ಪ್ರಜ್ವಲ್ ಮಿಟ್ಟಿ, ಎಮರ್ಜಿಂಗ್ ಪ್ಲೇಯರ್ ವೇದಾಂತ ತುರಕಾಣಿ ವೈಯಕ್ತಿಕ ಪ್ರಶಸ್ತಿಯನ್ನು ಪಡೆದರು.

---

# ಡಾ. ಬಿ.ಎಸ್. ರಾಠೋಡರಿಗೆ ಸನ್ಮಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಗದುಗಿನ ಕೆ.ಎಚ್. ಪಾಟೀಲ ಕ್ರೀಡಾಂಗಣದಲ್ಲಿ ಜರುಗಿದ ರಾಜ್ಯ ಮಟ್ಟದ ಪದವಿಪೂರ್ವ ಕಾಲೇಜುಗಳ ಟೆನಿಕ್ವಾಯಿಟ್ ಪದ್ಯಾಂಟದ ಉದ್ಘಾಟನಾ ಸಮಾರಂಭದಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಪರವಾಗಿ ಕಾನೂನು, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲರು ವಿದ್ಯಾದಾನ ಸಮಿತಿ ಬಾಲಕಿಯರ ಪ.ಪೂ ಕಾಲೇಜಿನ ಪ್ರಾಚಾರ್ಯ ಡಾ. ಬಿ.ಎಸ್. ರಾಠೋಡರು ಮೇಜರ್ ಹುದ್ದೆಗೆ ಪದೋನ್ನತಿ ಹೊಂದಿದ ನಿಮಿತ್ತ ಸನ್ಮಾನಿಸಿ ಅಭಿನಂದಿಸಿದರು.



ಕಳೆದ 20 ವರ್ಷಗಳಿಂದ ಎನ್.ಸಿ.ಸಿ ಅಧಿಕಾರಿಯಾಗಿ ಡಾ. ಬಿ.ಎಸ್. ರಾಠೋಡರು ಕ್ರಿಯಾಶೀಲವಾಗಿ ಕಾರ್ಯ ನಿರ್ವಹಿಸುತ್ತಿದ್ದು, ಇವರ ತರಬೇತಿ ಹಾಗೂ ಮಾರ್ಗದರ್ಶನದಲ್ಲಿ ನೂರಾರು ವಿದ್ಯಾರ್ಥಿಗಳು ಆರ್.ಡಿ, ಎನ್.ಆಯ್.ಸಿ, ಟಿ.ಎಸ್.ಸಿ ಹಾಗೂ ಇತರೆ ಕ್ಯಾಂಪ್‌ಗಳಲ್ಲಿ ಭಾಗವಹಿಸಿ ಉತ್ತಮ ಸಾಧನೆ ತೋರಿದ್ದಾರೆ. ಇವರ ಮಾರ್ಗದರ್ಶನ ಹಾಗೂ ಪ್ರೋತ್ಸಾಹದಿಂದಾಗಿ ಅನೇಕ ವಿದ್ಯಾರ್ಥಿಗಳು ಸೈನ್ಯ, ಪೋಲೀಸ್ ಮತ್ತಿತರ ರಕ್ಷಣಾ ಹುದ್ದೆಗಳಲ್ಲಿ ಸಮರ್ಪಣಾ ಮನೋಭಾವದಿಂದ ಸೇವೆ ಸಲ್ಲಿಸುತ್ತಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್‌ನ ಸದಸ್ಯರಾದ ಪ್ರೊ. ಎಸ್.ವಿ. ಸಂಕನೂರ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಗದಗ ಜಿ.ಪಂ ಮಾಜಿ ಅಧ್ಯಕ್ಷರುಗಳಾದ ವಾಸಣ್ಣ ಕುರುಡಗಿ, ಸಿದ್ದಲಿಂಗೇಶ ಪಾಟೀಲ, ಪ.ಪೂ ಇಲಾಖೆಯ ಉಪನಿರ್ದೇಶಕ ಸಿದ್ದಲಿಂಗ ಮಸನಾಯಿಕ ಮುಂತಾದವರಿದ್ದರು.

---

### ಗುರುಪ್ರತಿಪದೆ ಉತ್ಸವದ ಪೂರ್ವಭಾವಿ ಸಭೆಯಲ್ಲಿ ಡಾ. ನಾಗರಾಜ ಮಾಹಿತಿ

# ಜ. 22ರಿಂದ ಫೆ. 3ರವರೆಗೆ ಶ್ರೀ ದತ್ತಾತ್ರೇಯ ಉತ್ಸವ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಶ್ರೀ ದತ್ತಾತ್ರೇಯ ಗುರುಪ್ರತಿಪದೆ ಉತ್ಸವವು ಜ. 22ರಿಂದ ಫೆ. 3ರವರೆಗೆ ನಡೆಯಲಿದೆ ಎಂದು ಶ್ರೀ ದತ್ತ ಭಕ್ತ ಮಂಡಳಿ ಅಧ್ಯಕ್ಷ ಡಾ. ನಾಗರಾಜ ಗ್ರಾಮಪುರೋಹಿತ ಹೇಳಿದರು.

ಈ ಕುರಿತು ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜ. 22ರಿಂದ ಫೆ. 3ರವರೆಗೆ ಶ್ರೀ ದತ್ತಾತ್ರೇಯನಿಗೆ ಲಘುರುದ್ರಾಭಿಷೇಕ, ಸಂಜೆ ಪಾಲಕೀ ಸೇವೆ ಜರುಗಲಿವೆ. ಫೆ. 22ರಂದು ಬಿ.ಎಲ್. ಕುಲಕರ್ಣಿ ದಂಪತಿಗಳಿಂದ ಗಣಹೋಮ, ಜ. 24ರಂದು ಕೆ.ಬಿ. ದೇಸಾಯಿ ದಂಪತಿಗಳಿಂದ ಪವಮಾನಹೋಮ, ಬೆ. 11.30ಕ್ಕೆ ಕೊಪ್ಪಳದ ಶಾರದಾ ಶಂಕರಾಚಾರ್ಯ ಭಜನಾ ಮಂಡಳಿಯವರಿಂದ ಭಜನೆ ಜರುಗಲಿದೆ.

ಜ. 25ರಂದು ಆರ್.ಸಿ. ಕೊಂಡಿ ದಂಪತಿಗಳಿಂದ ಧನ್ವಂತರಿ ಹೋಮ, 11.30ಕ್ಕೆ ಶಾರದಾ ಭಜನಾ ಮಂಡಳಿಯವರಿಂದ ಭಜನೆ ಜರುಗಲಿದೆ. ಜ. 27ರಿಂದ ಫೆ. 2ರವರೆಗೆ ಮಾರನಬಸರಿಯ ವೇ. ಮೂ. ವಿಶ್ವನಾಥಭಟ್ಟ ವೈದ್ಯ ಇವರಿಂದ ಶ್ರೀ ಗುರುಚರಿತ್ರೆ ಪಾರಾಯಣ. ಜ. 30ರಂದು ಬೆ. 6ಕ್ಕೆ ಶ್ರೀ ಬ್ರಹ್ಮಚೈತನ್ಯ ಮಹಾರಾಜರ ತೊಟ್ಟಿಲೋತ್ಸವ ನಡೆಯಲಿದ್ದು, ಸಾಯಂಕಾಲ ಪೂಜ್ಯ ಶ್ರೀ ದತ್ತವಧೂತ ಮಹಾರಾಜರ ಆಗಮನವಾಗಲಿದೆ. ಜ. 31ರಂದು ಎಸ್.ಎಚ್. ಕುಲಕರ್ಣಿ ದಂಪತಿಗಳಿಂದ ದತ್ತಯಾಗವು ಪೂಜ್ಯ ದತ್ತಾವಧೂತರ ನೇತೃತ್ವದಲ್ಲಿ ನಡೆಯಲಿದೆ ಎಂದರು.

ಕಾರ್ಯದರ್ಶಿ ರಘುನಾಥ ಕೊಂಡಿ ಮಾತನಾಡಿ, ಫೆ. 1ರ ಬೆಳಿಗ್ಗೆ ಅರುಣ ಕುಲಕರ್ಣಿ (ಕುರಗಡ್ಡಿ)ಯವರಿಂದ ಕ್ಷೀರಾಭಿಷೇಕ, ರಾಜಣ್ಣ ಸದರಜೋಷಿಯವರಿಂದ ಬುತ್ತಿಪೂಜೆ, ಸಂಜೆ 6.30ಕ್ಕೆ ಕೋಟುಮಚಗಿಯ ಗಾಯತ್ರಿ ಕುಲಕರ್ಣಿಯವರಿಂದ ಸಂಗೀತ ಸೇವೆ ನಡೆಯಲಿದೆ. ಫೆ. 2ರಂದು ಡಾ. ಕೃಷ್ಣ ಜಿ. ಕಾಳೆ ದಂಪತಿಗಳಿಂದ ಲಘುರುದ್ರ ಸ್ವಾಹಾಕಾರ ಜರುಗಲಿದ್ದು, ಬೆ. 10ಕ್ಕೆ ಕಲಾವಿದ ಡಾ. ವೆಂಕಟೇಶ ಕುಲಕರ್ಣಿಯವರ ಸಂಗೀತ, 11ಕ್ಕೆ ಉಪನ್ಯಾಸ ನಡೆಯಲಿದೆ. ಡಾ. ಜಿ.ಕೆ. ಕಾಳೆ ಅಧ್ಯಕ್ಷತೆ ವಹಿಸಲಿದ್ದು, ತೆರಿಗೆ ಸಲಹೆಗಾರ ಆನಂದ ಪೋತ್ನಿಸ್ ಮುಖ್ಯ ಅತಿಥಿಗಳಾಗಿ, ಲಕ್ಕುಂಡಿಯ ದತ್ತಾತ್ರೇಯ ಜೋಷಿ ಉಪನ್ಯಾಸಕರಾಗಿ ಆಗಮಿಸಲಿದ್ದಾರೆ. ಸಂ. 6.30ಕ್ಕೆ ರಾಜಶ್ರೀ ಕುಲಕರ್ಣಿಯವರಿಂದ ಸಂಗೀತ ಜರುಗಲಿದೆ.

ಫೆ. 3ರಂದು ಬೆ. 8ಕ್ಕೆ ಗದಗನ ಅಭಿಷೇಕ ಜೋಷಿ ದಂಪತಿಗಳಿಂದ ಶ್ರೀ ಸತ್ಯದತ್ತ ವ್ರತ, ಬೆ. 10ಕ್ಕೆ ನಿವೃತ್ತರಿಗೆ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ ಜರುಗಲಿದೆ. ಸಾನ್ನಿಧ್ಯ ವೇ. ಬ್ರ. ಶ್ರೀ ಭುಜಂಗಶರ್ಮಾ ಜೋಷಿ, ಕೆ.ಬಿ. ದೇಸಾಯಿ ಅಧ್ಯಕ್ಷತೆ ವಹಿಸಲಿದ್ದಾರೆ. ಅಖಿಲ ಕರ್ನಾಟಕ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಸದಸ್ಯ ಗುರಣ್ಣ ಬಳಗಾನೂರ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. 12.30ಕ್ಕೆ ಕುರ್ತಕೋಟಿಯ ದಿಗಂಬರಶಾಸ್ತ್ರಿಗಳಿಂದ ಕೀರ್ತನೆ ಜರುಗಲಿದ್ದು, ನಂತರ ಗೋಪಾಲ ಕಾವಲಿ ನಡೆಯಲಿದೆ ಎಂದು ರಘುನಾಥ ಕೊಂಡಿ ತಿಳಿಸಿದರು.

ಇದೇ ಸಂದರ್ಭದಲ್ಲಿ ಗದಗ ಜಿಲ್ಲಾ ಬ್ರಾಹ್ಮಣ ಸಂಘದವರು ಪ್ರಕಟಿಸಿದ 2026ರ ಕ್ಯಾಲೆಂಡರ್‌ನ್ನು ಡಾ. ಜಿ.ಕೆ. ಕಾಳೆ ಬಿಡುಗಡೆ ಮಾಡಿದರು.

---

# ಸಾವಿತ್ರಿಬಾಯಿ ಫುಲೆ ಜನ್ಮದಿನ ಆಚರಣೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಉತ್ತಮ ಗುರು ತನ್ನ ಶಿಷ್ಯರಿಂದಲೇ ಗುರುತಿಸಲ್ಪಡುತ್ತಾನೆ. ಯಾವ ಶಿಷ್ಯ ಗುರುವಿಗಿಂತ ಮುಂದೆ ಹೋಗುತ್ತಾನೋ ಅವನೇ ಉತ್ತಮ ಶಿಕ್ಷಕನಾಗಿರುತ್ತಾನೆ ಎಂದು ಮುಖ್ಯೋಪಾಧ್ಯಾಯ ಎಲ್.ಎಸ್. ಅರಳಹಳ್ಳಿ ಹೇಳಿದರು.

ಅವರು ಸಮೀಪದ ಶಿಗ್ಲಿ ಗ್ರಾಮದ ಕೆ.ಜಿ. ಮುದಗಲ್ ಪ್ರೌಢಶಾಲೆಯಲ್ಲಿ ಶನಿವಾರ ಅಕ್ಷರದವ್ವ ಸಾವಿತ್ರಿಬಾಯಿ ಫುಲೆ ಅವರ ಜನ್ಮದಿನಾಚರಣೆ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಅರ್ಪಿಸಿ ಮಾತನಾಡಿದರು.


ಬುದ್ಧ, ಬಸವ, ಅಂಬೇಡ್ಕರ್, ಮಹಾತ್ಮ ಜ್ಯೋತಿಬಾ ಫುಲೆ ಹಾಗೂ ಇವರ ಜೊತೆಗೆ ಸಾವಿತ್ರಿಬಾಯಿ ಫುಲೆ ಹೋರಾಟದ ಕುರಿತು ತಿಳಿಯುವುದು ಮುಖ್ಯ. ಶಿಕ್ಷಣವೆಂದರೆ ತಿಳಿಯದ, ಅಕ್ಷರಗಳೆಂದರೆ ಗೊತ್ತಿಲ್ಲದ ಕಾಲದಲ್ಲಿ ಶಾಲೆಗಳನ್ನು ತೆರೆದು, ಭಾರತದಲ್ಲಿ ಅಕ್ಷರ ಕ್ರಾಂತಿ ಆರಂಭಿಸಿದ ಮೊದಲ ಮಹಿಳೆ ಸಾವಿತ್ರಿಬಾಯಿ ಫುಲೆಯವರಾಗಿದ್ದಾರೆ. ಇಂಥವರ ಸ್ಮರಣೆ ಮಾಡುವದು ಇಂದಿನ ಅಗತ್ಯವಾಗಿದೆ ಎಂದರು.

ಈ ಸಂದರ್ಭದಲ್ಲಿ ವೀರಣ್ಣ ಬೆಂಡಿಗೇರಿ, ಎಂ.ಬಿ. ಕಲ್ಲೂರ, ಟಿ.ಎಸ್. ಹೂಗಾರ, ವ್ಹಿ.ಎ. ಪಾಟೀಲ, ಜೆ.ಎಸ್. ಕರಜಗಿ, ಆರ್.ಎಸ್. ಕೆಂಚಪ್ಪನವರ, ಲಕ್ಷ್ಮೀ ರಿತ್ತಿ, ಮಂಜುಳಾ ಗುಡಿಮನಿ, ಡಿ.ಜಿ. ಮಠಪತಿ, ಎ.ಆಯ್. ಪಾಟೀಲ, ಜಿ.ಎಂ. ಜಮಾದಾರ, ಶೈಲಜಾ ಎಲಿಗಾರ ಮುಂತಾದವರಿದ್ದರು.

---

# ನಿಧನ ವಾರ್ತೆ

## ಗವಿಶಿದ್ದಪ್ಪ ಬ ಹೂಗಾರ



**ಡಂಬಳ :** ಸಮೀಪದ ಜಂತಲಿ ಗ್ರಾಮದ ಹೂಗಾರ ಸಮಾಜದ ಮುಖಂಡರು, ಪ್ರಗತಿಪರ ರೈತರಾದ ಗವಿಸಿದ್ದಪ್ಪ. ಬ. ಹೂಗಾರ ( 76) ಗುರುವಾರದಂದು ನಿಧನ ಹೊಂದಿದರು. ಮೃತರು ಪತ್ನಿ. ಮೂವರು ಪುತ್ರರು, ಮೂವರು ಸಹೋದರರು ಸೇರಿದಂತೆ ಅಪಾರ ಬಂಧು ಬಳಗ ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಶುಕ್ರವಾರ ಜಂತಲಿ ಗ್ರಾಮದಲ್ಲಿ ನಡೆಸಲಾಯಿತು.

ಸಂತಾಪ : ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಎಸ್ ಎಸ್ ಪಟ್ಟಣಶೆಟ್ಟರ, ಡಾ. ಪದಕಿ, ಕೊಟ್ರೇಶ್ ಮೆಣಸಿನಕಾಯಿ, ಕಳಕಪ್ಪ ಪಟ್ಟಣಶೆಟ್ಟಿ, ಗೋಣಿಬಸಪ್ಪ ಕೊರ್ಲಹಳ್ಳಿ, ಡಿ. ಡಿ. ಮೊರನಾಳ, ರಾಘವೇಂದ್ರ ಕುರಿ, ಜಿ. ವಿ. ಹಿರೇಮಠ, ವಿರೂಪಾಕ್ಷಪ್ಪ ಲಕ್ಕುಂಡಿ, ಎಂ. ಬಿ. ಮಡಿವಾಳರ ಸಂತಾಪ ಸೂಚಿಸಿದ್ದಾರೆ.

## ಶಾಂತಾಬಾಯಿ ಪವಾರ



ಗದಗ: ನಗರದ ಕಳಸಾಪುರ ರಿಂಗ್ ರಸ್ತೆಯ ಯಳಮಲಿ ಲೇಔಟ್ ನಿವಾಸಿ, ಎಸ್. ಎಸ್. ಕೆ. ಸಮಾಜದ ಹಿರಿಯರಾದ ಶ್ರೀಮತಿ ಶಾಂತಾಬಾಯಿ ಪಾಂಡುರಂಗಸಾ ಪವಾರ(82) ಅವರು ದಿ.02 ರಂದು ಶುಕ್ರವಾರ ರಾತ್ರಿ ನಿಧನರಾಧರು.

ಮೃತರು ಗಣೇಶ ಪಾಂಡುರಂಗಸಾ ಪವಾರ ಸೇರಿದಂತೆ ಮೂವರು ಪುತ್ರರು, ಮೂವರು ಪುತ್ರಿಯರು, ಸೊಸೆಯಂದಿರು, ಅಳಿಯಂದಿಯರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂದು-ಬಳಗವನ್ನು ಅಗಲಿದ್ದಾರೆ.

ಮೃತರ ಅಂತ್ಯಕ್ರಿಯೆಯು ದಿ.03 ರಂದು ಶನಿವಾರ ಜರುಗಿತು.

**ಸಂತಾಪ :** ಶ್ರೀಮತಿ ಶಾಂತಾಬಾಯಿ ಪವಾರ ಅವರ ನಿಧನಕ್ಕೆ ಎಸ್. ಎಸ್. ಕೆ. ಸಮಾಜ ಪಂಚ ಟ್ರಸ್ಟ್ ಕಮಿಟಿ. ತರುಣ ಸಂಘ ಹಾಗೂ ಸಮಾಜ ಬಾಂದವರು ಸಂತಾಪ ಸೂಚಿಸಿದ್ದಾರೆ.

## ಅನ್ನಕ್ಕ ರಾಚಪ್ಪ ಬೇವಿನಮರದ



**ಗದಗ:** ನಗರದ ಬಸವೇಶ್ವರ ನಗರದ ನಿವಾಸಿಗಳಾಗಿದ್ದ ಗದಗ ಬೆಟಗೇರಿ ನಗರಸಭೆ ಮಾಜಿ ಅಧ್ಯಕ್ಷರು ದಿ. ಶ್ರೀ ರಾಚಪ್ಪ ಹಲಕಾಟ್ಟೆಪ್ಪ ಬೇವಿನಮರದ ಇವರ ಧರ್ಮಪತ್ನಿ ಹಾಗೂ ಮಾಜಿ ನಗರಸಭಾ ಸದಸ್ಯರು ಮತ್ತು ಗದಗ ತಾಲೂಕ ಚಿತ್ರಕಲಾ ಶಿಕ್ಷಕರ ಸಂಘದ ಅಧ್ಯಕ್ಷರು ಹಾಗೂ ಶಿಕ್ಷಕರಾದ ತೋಂಟೇಶ ಬೇವಿನಮರದ ಇವರ ತಾಯಿ ಶ್ರೀಮತಿ ಅನ್ನಕ್ಕ ರಾಚಪ್ಪ ಬೇವಿನಮರದ ತಮ್ಮ 86ನೇ ವಯಸ್ಸಿನಲ್ಲಿ ಜ.3ರ ಶನಿವಾರ ನಿಧನರಾದರು. ಮೃತರಿಗೆ ಇಬ್ಬರು ಪುತ್ರಿಯರು, ಓರ್ವ ಪುತ್ರ ಸೇರಿದಂತೆ ಅಪಾರ ಬಂಧು ಬಳಗವನ್ನು ಬಿಟ್ಟು ಅಗಲಿದ್ದಾರೆ. ಜ 04 ರ ಮುಂಜಾನೆ 11 ಗಂಟೆಗೆ ಎ.ಎಸ್. ಎಸ್. ಕಾಮರ್ಸ್ ಕಾಲೇಜು ಹತ್ತಿರವಿರುವ ವೇಲ್ ಫೇರ್‌ಟೌನ್ ಶಿಪ್‌ನ 4 ನೇ ಅಡ್ಡ ರಸ್ತೆಯಲ್ಲಿರುವ ಸ್ವಗೃಹದಿಂದ ಅಂತಿಮಯಾತ್ರೆ ಹೊರಡಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

---

# ಶಿವಾನುಭವ ಕಾರ್ಯಕ್ರಮ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಬಸವ ಕೇಂದ್ರ ಹಾಗೂ ಜಾಗತಿಕ ಲಿಂಗಾಯತ ಮಹಾಸಭಾ ಸಂಯುಕ್ತ ಆಶ್ರಯದಲ್ಲಿ ಮಾಸಿಕ ಶಿವಾನುಭವ ಕಾರ್ಯಕ್ರಮವನ್ನು ಜ. 4ರಂದು ಸಂಜೆ 6.30 ಗಂಟೆಗೆ ಒಕ್ಕಲಗೇರಿಯ ಚಿಲ್ಲಾಳೇಶ್ವರ ಮಠದಲ್ಲಿ ಆಯೋಜಿಸಲಾಗಿದೆ.

ಶಿವಾನುಭವ ಕಾರ್ಯಕ್ರಮದಲ್ಲಿ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ ಮತ್ತು ದೇಶದ ಪ್ರಥಮ ಮಹಿಳಾ ಶಿಕ್ಷಕಿ ಸಾವಿತ್ರಿ ಬಾಯಿ ಫುಲೆ ಜಯಂತಿ ಕುರಿತು ಉಪನ್ಯಾಸವನ್ನು ಶಿರೋಳ ಕಾಲೇಜಿನ ಉಪನ್ಯಾಸಕ ಪ್ರೊ. ವೀರನಗೌಡ ಮರಿಗೌಡ್ರ ಉಪನ್ಯಾಸ ನೀಡುವರು. ಅಧ್ಯಕ್ಷತೆಯನ್ನು ಕೆ.ಎಸ್. ಚೆಟ್ಟಿ ವಹಿಸುವರು. ಆಸಕ್ತರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಕಾರ್ಯದರ್ಶಿ ಶೇಖಣ್ಣ ಕವಳಿಕಾಯಿ ಹಾಗೂ ಸಂಚಾಲಕ ಕಿರಣ ತಿಪ್ಪಣ್ಣವರ್ ವಿನಂತಿಸಿದ್ದಾರೆ.

# ಸ್ಥಿರ ಬೀದಿ ಬದಿ ವ್ಯಾಪಾರಸ್ಥರ ಸಮೀಕ್ಷೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ಬರುವ 2 ವಲಯಗಳವಾರು ಸ್ಥಿರ ಬೀದಿ ಬದಿ ವ್ಯಾಪಾರಸ್ಥರ ಸಮೀಕ್ಷೆಯನ್ನು ಜನವರಿ 4 ರಿಂದ ಕೈಗೊಳ್ಳಲಾಗುವುದು. ಈ ಸಮೀಕ್ಷೆ ಕಾರ್ಯದಲ್ಲಿ ಅರ್ಹ ಸ್ಥಿರ ಬೀದಿ ಬದಿ ವ್ಯಾಪಾರಸ್ಥರು ತಮ್ಮ ಅಗತ್ಯ ದಾಖಲಾತಿಗಳೊಂದಿಗೆ ಹಾಜರುಪಡಿಸಿ ಸಮೀಕ್ಷೆ ಮಾಡಿಸಲು ಸಹಕರಿಸುವಂತೆ ಎಲ್ಲಾ ಬೀದಿ ಬದಿ ವ್ಯಾಪಾರಸ್ಥರಿಗೆ ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದಿಶಾ ಸಮಿತಿ ಸಭೆಯ ಸಮಯ ಬದಲಾವಣೆ

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜನವರಿ 6 ರಂದು ಬೆಳಿಗ್ಗೆ 11 ಗಂಟೆಗೆ ಜರುಗಬೇಕಾಗಿದ್ದ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ( ದಿಶಾ) ಸಮಿತಿಯ ಪ್ರಗತಿ ಪರಿಶೀಲನಾ ಸಭೆಯು ಮಧ್ಯಾಹ್ನ 3 ಗಂಟೆಗೆ ಹಾವೇರಿ ಸಂಸದರು ಹಾಗೂ ದಿಶಾ ಸಮಿತಿಯ ಅಧ್ಯಕ್ಷರಾದ ಬಸವರಾಜ ಬೊಮ್ಮಾಯಿ ಅವರ ಅಧ್ಯಕ್ಷತೆಯಲ್ಲಿ ಜರುಗಲಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ದಿಶಾ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ತಿಳಿಸಿದ್ದಾರೆ.

# ಜ. 9ರಂದು ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಬಿ.ಅಸೂಟಿ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯು ಜನವರಿ 9 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜರುಗಲಿದೆ ಎಂದು ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಗ್ಯಾರಂಟಿ ಉತ್ಸವ ಕಾರ್ಯಕ್ರಮದ ಪೂರ್ವಭಾವಿ ಸಭೆಯಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು ಸೂಚನೆ**

# ಗ್ಯಾರಂಟಿ ಉತ್ಸವವನ್ನು ಅರ್ಥಪೂರ್ಣವಾಗಿ ಆಯೋಜಿಸಿ



> ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷ ಎಸ್.ಆರ್. ಪಾಟೀಲ ಮಾತನಾಡಿ, ಗ್ಯಾರಂಟಿ ಉತ್ಸವದ ಯಶಸ್ವಿಗಾಗಿ ಗ್ಯಾರಂಟಿ ಅನುಷ್ಠಾನ ಸಮಿತಿಗಳ ತಾಲೂಕು ಅಧ್ಯಕ್ಷರಿಗೆ ಹಾಗೂ ಯೋಜನೆಗಳ ಮುಖ್ಯಸ್ಥರಿಗೆ ಜವಾಬ್ದಾರಿ ನೀಡಲಾಗಿದೆ. ಈಗಾಗಲೇ ಪೂರ್ವಭಾವಿ ಸಭೆಗಳನ್ನು ಜರುಗಿಸಿ, ಸಿದ್ಧತೆಯನ್ನು ಪರಿಶೀಲಿಸಲಾಗಿದೆ. ಯೋಜನೆಗಳ ಮಹತ್ವ ಮತ್ತು ಲಾಭ ಎಲ್ಲರಿಗೂ ಮನವರಿಕೆ ಆಗುವಂತೆ ಕಾರ್ಯಕ್ರಮ ಅರ್ಥಪೂರ್ಣವಾಗಿ ಜರುಗಿಸಲು ಅಧಿಕಾರಿಗಳು ಕೆಲಸ ನಿರ್ವಹಿಸಬೇಕೆಂದು ಹೇಳಿದರು.

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಜನವರಿ 5ರಂದು ಧಾರವಾಡ ಜಿಲ್ಲೆಯಲ್ಲಿ ಆಯೋಜಿಸಲಾಗುತ್ತಿರುವ ಕರ್ನಾಟಕ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಪಂಚ ಗ್ಯಾರಂಟಿ ಯೋಜನೆಗಳ ಉತ್ಸವ ಕಾರ್ಯಕ್ರಮವನ್ನು ಅತ್ಯಂತ ಅರ್ಥಪೂರ್ಣವಾಗಿ ಹಾಗೂ ಮಾದರಿಯಾಗಿ ರೂಪಿಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಅವರು ಶನಿವಾರ ಮಧ್ಯಾಹ್ನ ಧಾರವಾಡ ಜಿಲ್ಲಾ ಪಂಚಾಯಿತಿ ಸಭಾಭವನದಲ್ಲಿ ಆಯೋಜಿಸಿದ್ದ ಗ್ಯಾರಂಟಿ ಉತ್ಸವದ ಪೂರ್ವಭಾವಿ ಸಭೆ ಉದ್ದೇಶಿಸಿ ಮಾತನಾಡಿದರು.

ರಾಜ್ಯದ ಅಭಿವೃದ್ಧಿಯಲ್ಲಿ ಮತ್ತು ಆರ್ಥಿಕ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರ ವಹಿಸಿರುವ ಪಂಚ ಗ್ಯಾರಂಟಿ ಯೋಜನೆಗಳ ಮಾಹಿತಿಯು ಗ್ಯಾರಂಟಿ ಉತ್ಸವದ ಮೂಲಕ ಪ್ರತಿ ಮನೆಗಳಿಗೆ ಮತ್ತು ವ್ಯಕ್ತಿಗಳಿಗೆ ತಲುಪಬೇಕು. ಯೋಜನೆಗಳ ಲಾಭ ಎಲ್ಲ ಅರ್ಹ ನಾಗರಿಕರಿಗೂ ಸಿಗುವಂತೆ ಮಾಡಬೇಕು. ಈ ಹಿನ್ನೆಲೆಯಲ್ಲಿ ಗ್ಯಾರಂಟಿ ಉತ್ಸವವು ಶಿಸ್ತುಬದ್ಧವಾಗಿ ಜರುಗಬೇಕೆಂದು ಅವರು ಹೇಳಿದರು.

ಗ್ಯಾರಂಟಿ ಉತ್ಸವದ ಯಶಸ್ವಿಗಾಗಿ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಈಗಾಗಲೇ 10ಕ್ಕೂ ಹೆಚ್ಚು ಸಮಿತಿಗಳನ್ನು ರಚಿಸಿ, ಕಾರ್ಯಕ್ರಮದ ಸುವ್ಯವಸ್ಥಿತ ಆಯೋಜನೆಗೆ ಆದೇಶಿಸಿದ್ದಾರೆ. ಇದು ಸರ್ಕಾರದ ಮಹತ್ವದ ಕಾರ್ಯಕ್ರಮ ವಾಗಿರುವುದರಿಂದ ಸಮಿತಿಗಳಿಗೆ ನೇಮಕವಾಗಿರುವ ಅಧಿಕಾರಿಗಳು ಯಾವುದೇ ಕಾರಣಕ್ಕೂ ನಿರ್ಲಕ್ಷ್ಯ ವಹಿಸಬಾರದು. ತಮಗೆ ನೀಡಿರುವ ಜವಾಬ್ದಾರಿಗಳನ್ನು ಎಲ್ಲಾ ಅಧಿಕಾರಿಗಳು ಕಟ್ಟುನಿಟ್ಟಾಗಿ ನಿರ್ವಹಿಸಬೇಕು ಎಂದು ಹೇಳಿದರು.

ಎಲ್ಲಾ ಇಲಾಖೆಯ ಅಧಿಕಾರಿಗಳು ಒಗ್ಗಟ್ಟಿನಿಂದ, ಸಮನ್ವಯದೊಂದಿಗೆ ಪರಸ್ಪರ ಚರ್ಚಿಸಿ, ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು. ಸಾರಿಗೆ, ಊಟದ ವ್ಯವಸ್ಥೆಯನ್ನು ಸಮರ್ಪಕವಾಗಿ ಮಾಡಬೇಕು ಹಾಗೂ ಕಾರ್ಯಕ್ರಮದಲ್ಲಿ ಯಾವುದೇ ರೀತಿಯ ಲೋಪವಾಗದಂತೆ ನೋಡಿಕೊಳ್ಳಬೇಕು ಎಂದು ಸೂಚಿಸಿದರು.

ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಮಾತನಾಡಿ, ಗ್ಯಾರಂಟಿ ಉತ್ಸವ ಕಾರ್ಯಕ್ರಮದ ಪ್ರತಿಯೊಂದು ಹಂತವನ್ನು ಪೂರ್ವಯೋಜನೆಯೊಂದಿಗೆ ಅನುಷ್ಠಾನಗೊಳಿಸಬೇಕು. ವಿವಿಧ ಇಲಾಖೆಗಳ ನಡುವೆ ಸಮನ್ವಯ ಅತ್ಯಂತ ಅಗತ್ಯವಾಗಿದ್ದು, ಪ್ರತಿಯೊಬ್ಬ ಅಧಿಕಾರಿಯೂ ತನ್ನ ಕರ್ತವ್ಯವನ್ನು ಜವಾಬ್ದಾರಿಯಿಂದ ನಿರ್ವಹಿಸಬೇಕು ಎಂದು ಹೇಳಿದರು.

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಉಪಾಧ್ಯಕ್ಷ ಮುರಗಯ್ಯಸ್ವಾಮಿ ವಿರಕ್ತಮಠ, ಮಹಾನಗರ ಪಾಲಿಕೆ ವ್ಯಾಪ್ತಿ ಗ್ಯಾರಂಟಿ ಯೋಜನಾ ಅನುಷ್ಠಾನ ಸಮಿತಿ ಅಧ್ಯಕ್ಷ ಪ್ರಕಾಶ ಹಳಿಯಾಳ, ಜಿಲ್ಲಾ ಪ್ರಾಧಿಕಾರದ ಉಪಾಧ್ಯಕ್ಷರಾದ ರತ್ನಾ ತೇಗೂರಮಠ, ಶಾಂತಪ್ಪ ಅಕ್ಕಿ, ಸುಧೀರ ಬೋಳಾರ, ರೇಹನ್ ರಝಾ ಐನಾಪೂರಿ, ವಿರೇಶ ಕಡಕೋಳಮಠ ವೇದಿಕೆಯಲ್ಲಿದ್ದರು.

ಜಿ.ಪಂ ಉಪ ಕಾರ್ಯದಶಿ ಮಲ್ಲಿಕಾರ್ಜುನ ತೊದಲಬಾಗಿ ಸ್ವಾಗತಿಸಿ, ಸಭೆ ನಿರ್ವಹಿಸಿ, ವಂದಿಸಿದರು. ಸಭೆಯಲ್ಲಿ ಗ್ಯಾರಂಟಿ ಯೋಜನೆಯ ಜಿಲ್ಲಾ ಪ್ರಾಧಿಕಾರದ ಸದಸ್ಯರಾದ ವಿನಾಯಕ ಕುರುಬರ, ಅರವಿಂದ ಶಿ.ಏಗನಗೌಡರ, ಬಸಪ್ಪ ಮಹಾಬಳೇಶ್ವರ ಬಾವಕಾರ, ಮಂಜುನಾಥ ರಾ.ಮಾಯಣ್ಣವರ, ವರ್ಧಮಾನಗೌಡ ಲ.ಹಿರೇಗೌಡರ, ಶಿವಾನಂದ ಭೂಮಣ್ಣವರ, ಅಬ್ದುಲ್ ರಸೀದ ಭೋಲಾಭಾಯಿ, ಗೀತಾ ಥಾವಂಶಿ, ಶಿವಕುಮಾರ ಕೆ.ಖಂಡೇಕರ ಸೇರಿದಂತೆ ಅನುಷ್ಠಾನ ಪ್ರಾಧಿಕಾರದ ಸದಸ್ಯರು, ಗ್ಯಾರಂಟಿ ಯೋಜನೆಗಳ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಅದ್ಧೂರಿಯಿಂದ ಜರುಗಿದ ಶ್ರೀ ಅಯ್ಯಪ್ಪಸ್ವಾಮಿ ಮಹಾಪೂಜೆ



**■ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ನರಸಾಪೂರ ಗ್ರಾಮದ ಖಾದಿ ನಗರದ ಶ್ರೀ ವರಸಿದ್ಧಿ ವಿನಾಯಕ ದೇವಸ್ಥಾನದ ಸಮುದಾಯ ಭವನದಲ್ಲಿನ ಶ್ರೀ ರಂಗಪ್ಪಜ್ಜ ಸನ್ನಿಧಾನದಲ್ಲಿ ಶ್ರೀ ಅಯ್ಯಪ್ಪಸ್ವಾಮಿಯ ಮಹಾಪೂಜೆ ಶನಿವಾರ ಅದ್ಧೂರಿಯಾಗಿ ಜರುಗಿತು.

ದೇವು ಗುರುಸ್ವಾಮಿ ಹಾಗೂ ನಾರಾಯಣ ಗುರುಸ್ವಾಮಿ ನೇತೃತ್ವದಲ್ಲಿ ಶ್ರೀ ಅಯ್ಯಪ್ಪಸ್ವಾಮಿಯ ಮಹಾಪೂಜೆ ವಿಧಿವಿಧಾನಗಳೊಂದಿಗೆ ನೆರವೇರಿತು. ಹೂವಿನ ಅಲಂಕಾರದೊಂದಿಗೆ ಶ್ರೀ ಅಯ್ಯಪ್ಪಸ್ವಾಮಿ ಮಂಟಪವನ್ನು ನಿರ್ಮಿಸಿ ಶ್ರೀ ಅಯ್ಯಪ್ಪಸ್ವಾಮಿ ಹಾಗೂ ಶ್ರೀ ಗಣೇಶ ಮೂರ್ತಿಯ ಭಾವಚಿತ್ರವನ್ನಿರಿಸಿ ಅಯ್ಯಪ್ಪ ಮಾಲಾಧಾರಿಗಳು ಅಯ್ಯಪ್ಪಸ್ವಾಮಿ ಭಕ್ತಿಯ ಹಾಡುಗಳನ್ನು ಹಾಡುತ್ತ ವಿಶೇಷ ಪೂಜೆ ನೆರವೇರಿಸಿದರು.

ಶ್ರೀ ರಂಗಪ್ಪಜ್ಜ ಸನ್ನಿಧಾನದಲ್ಲಿ ಶ್ರೀ ಅಯ್ಯಪ್ಪಸ್ವಾಮಿ ಪೂಜೆಯೊಂದಿಗೆ 18 ಮೆಟ್ಟಿಲುಗಳ ಪೂಜೆ, ಮಂಗಳಾರತಿ ಜೊತೆಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ಸಾವಿರಾರು ಭಕ್ತಾದಿಗಳು ಪಾಲ್ಗೊಂಡು ಮಹಾಪೂಜೆಯನ್ನು ಯಶಸ್ವಿಗೊಳಿಸಿದರು. ನಂತರ ಮಹಾಅನ್ನಸಂತರ್ಪಣೆ ನೆರವೇರಿತು.

ಮಲಾಧಾರಿಗಳಾದ ಉಮೇಶ ಕನವಳ್ಳಿ, ಪಂಪಣ್ಣ ಶ್ಯಾವಿ, ತಮೇಶ ತಟ್ಟಿ, ಮೈಲಾರಪ್ಪ ಶ್ಯಾವಿ, ರಾಜು ಕನಕಿ, ನಗರಸಭೆ ಸದಸ್ಯೆ ಲಕ್ಷ್ಮೀ ಕಾಕಿ, ಶಂಕರ ಕಾಕಿ ಹಾಗೂ ಖಾದಿ ನಗರದ ನಾಗರಿಕ ಹಿತರಕ್ಷಣಾ ಸಮಿತಿ ಅಧ್ಯಕ್ಷ ಕಲ್ಲಯ್ಯ ಹಿರೇಮಠ ಸೇರಿದಂತೆ ಸಮಿತಿಯ ಪದಾಧಿಕಾರಿಗಳು ಹಾಗೂ ಖಾದಿ ನಗರದ ನಿವಾಸಿಗಳು ಪಾಲ್ಗೊಂಡಿದ್ದರು.


ಇಂದು ಇರುಮುಡಿ ಕಟ್ಟುವ ಕಾರ್ಯಕ್ರಮ ಜ. 4ರಂದು ಬೆಳಿಗ್ಗೆ 7ಕ್ಕೆ ಇರುಮುಡಿ ಕಟ್ಟುವ ಕಾರ್ಯಕ್ರಮ ಜರುಗಲಿದ್ದು, ಸಂಜೆ 5ಕ್ಕೆ ಶ್ರೀ ವರಸಿದ್ಧಿ ವಿನಾಯಕ ಸನ್ನಿಧಾನದಿಂದ ಗುರುಸ್ವಾಮಿಗಳು ಹಾಗೂ ಮಾಲಾಧಾರಿಗಳು ಶ್ರೀ ರಂಗಪ್ಪಜ್ಜನ ಮಠದವರೆಗೆ ಪಾದಯಾತ್ರೆ ಮೂಲಕ ಸಾಗಿ ಅಲ್ಲಿಂದ ಶಬರಿಮಲೇ ಯಾತ್ರೆ ಕೈಗೊಳ್ಳುವರು ಎಂದು ಪ್ರಕಟಣೆ ತಿಳಿಸಿದೆ.

**ಪಾರಂಪರಿಕ ಶೌರ್ಯ ಕಲೆಗಳ ಅಧ್ಯಯನ ಕೇಂದ್ರದ ನಿರ್ದೇಶಕ ಡಾ. ಹಾಸನ ರಘು ಅವರಿಗೆ ಸನ್ಮಾನ**

# ಸಾಧಿಸುವ ಛಲವಿದ್ದರೆ ಜಗತ್ತು ಗುರುತಿಸುತ್ತದೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣಕ್ಕೆ ಭೇಟಿ ನೀಡಿದ್ದ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ, ಜಾನಪದ, ಸಮರ ಕಲೆಗಳ ಪ್ರಾಚಾರ್ಯ, ಪಾರಂಪರಿಕ ಶೌರ್ಯ ಕಲೆಗಳ ಅಧ್ಯಯನ ಕೇಂದ್ರದ ನಿರ್ದೇಶಕ ಡಾ. ಹಾಸನ ರಘು ಅವರನ್ನು ಶನಿವಾರ ರಾಜ್ಯ ಮಲ್ಲಕಂಬ ಸಂಸ್ಥೆಯ ವತಿಯಿಂದ ಗೌರವಿಸಲಾಯಿತು.



ಡಾ. ಹಾಸನ್ ರಘು ಎಂದ ತಕ್ಷಣ ಕನ್ನಡ ಚಲನಚಿತ್ರಗಳಲ್ಲಿ ಸಾಹಸ ನಿರ್ದೇಶಕನಾಗಿ 150ಕ್ಕೂ ಅಧಿಕ ಚಿತ್ರಗಳಲ್ಲಿ ಸಾಹಸ ನಿರ್ದೇಶಕನಾಗಿ ಕೆಲಸ ಮಾಡಿ ಚಿರಪರಿಚಿತನಾಗಿರುವ ಹಾಗೂ ದಿ. ಶಂಕರನಾಗ್ ಅವರ ಆಕ್ಸಿಡೆಂಟ್ ಚಿತ್ರಕ್ಕೆ ಸಾಹಸ ನಿರ್ದೇಶನಕ್ಕಾಗಿ ರಾಜ್ಯ ಪ್ರಶಸ್ತಿ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಸೇರಿದಂತೆ ನೂರಾರು ಪ್ರಶಸ್ತಿಗಳಿಗೆ ಭಾಜನರಾಗಿರುವ ಪಟ್ಟಣಕ್ಕೆ ಆಗಮಿಸಿದ ಸಂದರ್ಭದಲ್ಲಿ ಅವರ ಅಭಿಮಾನಿಗಳು ಹಾಗೂ ಮಲ್ಲಕಂಬ ಸಂಸ್ಥೆಯವರು ಅವರನ್ನು ಗೌರವಿಸಿದರು.

ಸನ್ಮಾನ ಸ್ವೀಕರಿಸಿದ ಡಾ. ಹಾಸನ ರಘು ಮಾತನಾಡಿ, ಜೀವನದಲ್ಲಿ ಎಲ್ಲರೂ ಡಾಕ್ಟರ್, ಇಂಜಿನೀಯರ್ ಆಗಬೇಕೆಂಬ ಇಚ್ಛೆ ಹೊಂದಿರುತ್ತಾರೆ. ಆದರೆ ಎಲ್ಲರಿಗೂ ಈ ಆಸೆ ಈಡೇರುವದಿಲ್ಲ. ಏನೂ ಆಗದೆ ಇದ್ದರೂ ಏನು ಬೇಕಾದರೂ ಸಾಧನೆ ಮಾಡಬಹುದು ಎನ್ನುವದಕ್ಕೆ ನಾನೇ ಸಾಕ್ಷಿ. 1971ರ ಹಿಂದೂ-ಪಾಕ್ ಯುದ್ಧದಲ್ಲಿ ಭಾಗಿಯಾಗಿ ಸೇವಾಪದಕವನ್ನು ಪಡೆದು, ಸೇನೆಯಲ್ಲಿ ಜಿಮ್ನ್ಯಾಸ್ಟಿಕ್ ಪಟುವಾಗಿದ್ದು, ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಸ್ಪರ್ಧೆಗಳಲ್ಲಿ ಭಾಗವಹಿಸಿ ಸಾಧನೆ ಮಾಡಿದ್ದೇನೆ. 1980ರಲ್ಲಿ ದಿವಂಗತ ಪುಟ್ಟಣ್ಣ ಕಣಗಾಲ್ ಅವರ ಮಾರ್ಗದರ್ಶನದಲ್ಲಿ ರಂಗನಾಯಕಿ ಚಿತ್ರದ ಮೂಲಕ ಕಾರ್ಯನಿರ್ವಹಿಸಿ, ಕನ್ನಡ ಚಲನಚಿತ್ರ ಕಾರ್ಮಿಕರ ಸಂಘಟನೆ, ಸಾಹಸ ಕಲಾವಿದರ ಸಂಘಟನೆ ಸ್ಥಾಪಿಸಿ ಕನ್ನಡ ಚಿತ್ರರಂಗದಲ್ಲಿ ಕನ್ನಡಿಗರನ್ನು ಬೆಳೆಸಲು ವಿಶೇಷ ಕ್ರಮಗಳನ್ನು ಕೈಗೊಂಡಿದ್ದೇನೆ.

> ಅತಿಥಿಗಳಾಗಿ ಆಗಮಿಸಿದ್ದ ಪಿಎಸ್ಐ ನಾಗರಾಜ ಗಡಾದ ಮಾತನಾಡಿ, ಮಲ್ಲಕಂಬ ಕ್ರೀಡೆಯೇ ಒಂದು ರೋಮಾಂಚನಕಾರಿ ಆಟ, ಕರ್ನಾಟಕದಲ್ಲಿ ಮಲ್ಲಕಂಬಕ್ಕೆ ವಿಶೇಷ ಆದ್ಯತೆ ಇತ್ತು.
>
> ಪದ್ಮಶ್ರೀ ಪ್ರಶಸ್ತಿಗೆ ಬಾಜಿನರಾಗಿರುವ ಸಾಹಸ ನಿರ್ದೇಶಕ ಡಾ. ರಘು ಅವರ ಸಾಧನೆ, ಇಳಿ ವಯಸ್ಸಿನಲ್ಲಿಯೂ ಕುಂದದ ಅವರ ವಿಶ್ವಾಸ ಎಲ್ಲರಿಗೂ ಮಾದರಿಯಾಗಬೇಕು ಎಂದು ಹೇಳಿದರು.

ಇಲ್ಲಿ ನನ್ನ ಸಾಹಸಗಾಥೆ ಹೇಳುವದಕ್ಕಿಂತ ಯಾವುದೇ ವಿದ್ಯೆ ಇರಲಿ, ಅದರಲ್ಲಿ ಸಾಧನೆ ಮಾಡುವ ಛಲ ನಮ್ಮದಾಗಬೇಕು. ಅಂದಾಗಲೇ ಜಗತ್ತು ನಮ್ಮನ್ನು ಗುರುತಿಸಲು ಸಾಧ್ಯವಾಗುತ್ತದೆ. ಲಕ್ಷ್ಮೇಶ್ವರದಲ್ಲಿ ಮಲ್ಲಕಂಬದ ಬಗ್ಗೆ ವಿಶೇಷ ಆಸಕ್ತಿ ವಹಿಸಿ ಕಾರ್ಯ ಮಾಡುತ್ತಿರುವದು ಮೆಚ್ಚುಗೆಯ ಸಂಗತಿಯಾಗಿದೆ. ಆದರೆ ಇದನ್ನು ಅಂತಾರಾಷ್ಟ್ರೀಯ ಮಟ್ಟದಲ್ಲಿ ಮಾಡುವ ನಿಟ್ಟಿನಲ್ಲಿ ನೀವೆಲ್ಲ ಮುಂದಾಗಬೇಕು ಎಂದು ಕರೆ ನೀಡಿದರು.

ಇದೇ ಸಂದರ್ಭದಲ್ಲಿ ಪಿಎಸ್ಐ ನಾಗರಾಜ ಗಡದ ಮತ್ತು ಬಾಬು ಅಳವಂಡಿಯವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ರಾಜ್ಯ ಮಲ್ಲಕಂಬ ಸಂಸ್ಥೆಯ ಅಧ್ಯಕ್ಷ ಪ್ರಕಾಶ ಮ್ಯಾಗೇರಿ ವಹಿಸಿದ್ದರು. ಕಾರ್ಯಕ್ರಮದಲ್ಲಿ ಕಾರ್ಯದರ್ಶಿ ಸೊಮಶೇಖರ ಕೊಡ್ಲಿ, ಬಸವರಾಜ ಗಡೆಪ್ಪನವರ, ಮಹಾಂತೇಶ ಹವಳದ, ಎಂ.ಎಂ. ಗದಗ, ಶಾಂಬಯ್ಯ ಹಿರೇಮಠ, ಎಂ.ಆಯ್. ಕಣಕೆ, ಗಿರೀಶ ಅಗಡಿ, ರಾಜು ಹುಲಮನಿ, ಧರ್ಮರಾಜ ಬಟಗುರ್ಕಿ, ಡಿ.ಎಂ. ಪೂಜಾರ, ವಿ.ಎ. ಪಾಟೀಲ, ಎಲ್.ಎಸ್. ಅರಳಿಹಳ್ಳಿ ಮುಂತಾದವರಿದ್ದರು.

# ಬ್ಯಾಂಕಿನಲ್ಲಿನ ಸೌಲಭ್ಯಗಳ ಕೊರತೆ ನೀಗಿಸಲು ಆಗ್ರಹ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣದಲ್ಲಿರುವ ಕರ್ನಾಟಕ ಗ್ರಾಮೀಣ ಬ್ಯಾಂಕಿನಲ್ಲಿನ ಕೊರತೆಗಳನ್ನು ಪರಿಹರಿಸಿ ಗ್ರಾಹಕರಿಗೆ ಉತ್ತಮ ಸೇವೆ ಒದಗಿಸಲು ಬ್ಯಾಂಕ್ ಆಡಳಿತ ಮಂಡಳಿ ಕಾರ್ಯೋನ್ಮುಖವಾಗಬೇಕೆಂದು ನಿವೃತ್ತ ಸೈನಿಕರ ಸಂಘದ ಅಧ್ಯಕ್ಷ ಶಿವಪುತ್ರಪ್ಪ ಸಂಗನಾಳ ಬ್ಯಾಂಕಿನ ಹಿರಿಯ ಅಧಿಕಾರಿಗಳನ್ನು ಆಗ್ರಹಿಸಿದ್ದಾರೆ.




ಈ ಕುರಿತು ವಲಯ ವ್ಯವಸ್ಥಾಪಕರಿಗೆ ಸಂಘದ ವತಿಯಿಂದ ದೂರು ನೀಡಿರುವ ಅವರು, ಬ್ಯಾಂಕಿನಲ್ಲಿ ಕಳೆದ 3-4 ತಿಂಗಳಿನಿಂದ ಪಾಸ್‌ಬುಕ್ ಎಂಟ್ರಿಯನ್ನೇ ಮಾಡುತ್ತಿಲ್ಲ. ಸಿಬ್ಬಂದಿಯವರನ್ನು ಕೇಳಿದರೆ ಪ್ರಿಂಟಿಂಗ್ ಮಶಿನ್ ಹಾಳಾಗಿದೆ ಎಂದು ಹೇಳುತ್ತಾರೆ. ತಿಂಗಳುಗಟ್ಟಲೆ ಈ ಅವ್ಯವಸ್ಥೆ ಸರಿಯಾಗದೆ ನಮಗೆ ತೀವ್ರ ತೊಂದರೆಯಾಗುತ್ತಿದೆ. ಸಿಬ್ಬಂದಿ ಕೊರತೆಯೂ ಇರುವದರಿಂದ ಒಂದು ಕೆಲಸಕ್ಕಾಗಿ ಗ್ರಾಹಕರು ಐದಾರು ಸಾರೆ ಬ್ಯಾಂಕಿಗೆ ತಿರುಗಾಡಬೇಕು.

ನಿಯಮದ ಪ್ರಕಾರ ಬ್ಯಾಂಕಿನಲ್ಲಿ ಏಳು ಜನ ಸಿಬ್ಬಂದಿ ಕಾರ್ಯ ನಿರ್ವಹಿಸಬೇಕು. ಆದರೆ ಕಾರ್ಯ ನಿರ್ವಹಿಸುತ್ತಿರುವುದು ಕೇವಲ ನಾಲ್ಕೇ ಜನ. ಇದರಿಂದ ವಾರದ ಎಲ್ಲ ದಿನಗಳಲ್ಲಿ ಗ್ರಾಹಕರಿಂದ ತುಂಬಿ ತುಳುಕುತ್ತಿರುವ ಬ್ಯಾಂಕಿನಲ್ಲಿ ಸಮರ್ಪಕ ಸೇವೆಯನ್ನು ಒದಗಿಸಲು ಸಿಬ್ಬಂದಿಯವರಿಂದ ಸಾಧ್ಯವಾಗುತ್ತಿಲ್ಲ. ವೈದ್ಯಕೀಯ ರಜೆಯ ಮೇಲೆ ಹೋಗಿರುವ ಸಿಬ್ಬಂದಿಯ ಸ್ಥಾನದಲ್ಲಿ ಮತ್ತಾರೂ ಬಂದಿಲ್ಲ. ಇದೆಲ್ಲವನ್ನೂ ತಕ್ಷಣವೇ ಸರಿಪಡಿಸಬೇಕೆಂದು ಆಗ್ರಹಿಸಿದ್ದಾರೆ.

> ಅವಶ್ಯಕತೆ ಇರುವ ಗ್ರಾಹಕರಿಗೆ ನಾವು ಸ್ಟೇಟ್‌ಮೆಂಟ್ ಕೊಡುತ್ತಿದ್ದೇವೆ. ನಮ್ಮಲ್ಲಿ ಸಮರ್ಪಕವಾದ ಸಿಬ್ಬಂದಿ ಇದ್ದರೆ ಇನ್ನಷ್ಟು ಉತ್ತಮ ಸೇವೆ ಒದಗಿಸಲು ಸಾಧ್ಯವಾಗುತ್ತದೆ. ಆದರೂ ಇರುವ ಸಿಬ್ಬಂದಿಯಿಂದಲೇ ನಾವು ಉತ್ತಮ ಸೇವೆ ಒದಗಿಸಲು ಪ್ರಯತ್ನಿಸುತ್ತಿದ್ದೇವೆ.
>
> **-ವೆಂಕಟೇಶ** ಸಿ.
> ವ್ಯವಸ್ಥಾಪಕರು.



ಲಕ್ಕುಂಡಿಯಲ್ಲಿ ಲಕ್ಷ್ಮೀನಾರಾಯಣ ಪತ್ತಿನ ಸೌಹಾರ್ದ ಸಹಕಾರಿ ಸಂಘದ 2026ರ ದಿನದರ್ಶಿಕೆಯನ್ನು ಹರ್ಲಾಪೂರ ಕೊಟ್ಟೂರೇಶ್ವರ ಮಠದ ಡಾ. ಕೊಟ್ಟೂರೇಶ್ವರ ಸ್ವಾಮೀಜಿಗಳು ಬಿಡುಗಡೆಗೊಳಿಸಿದರು. ಸಂಘದ ಅಧ್ಯಕ್ಷ ಬಸವರಾಜ ಮುಳ್ಳಾಳ, ಉಪಾಧ್ಯಕ್ಷ ಮೃತ್ಯುಂಜಯ ನಡುವಿನಮಠ ಹಾಗೂ ಸದಸ್ಯರು ಹಾಜರಿದ್ದರು.



ಲಕ್ಷ್ಮೇಶ್ವರದ ಸರ್ಕಾರಿ ಹೆಣ್ಣುಮಕ್ಕಳ ಪ್ರಾಥಮಿಕ ಶಾಲೆಯಲ್ಲಿ ಅಕ್ಷರದ ಅವ್ವ ಸಾವಿತ್ರಿಬಾಯಿ ಫುಲೆ ಅವರ ಜಯಂತ್ಯುತ್ಸವ ಆಚರಿಸಲಾಯಿತು. ಶಿಕ್ಷಕ ವೃಂದ, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ವಿಕಲಚೇತನರ ಪಾಸ್ ಅವಧಿ ವಿಸ್ತರಣೆ

**■ವಿಜಯಸಾಕ್ಷಿ ಸುದ್ದಿ, ಗದಗ**

ವಿಕಲಚೇತನರ ಪಾಸ್ ಹೊಂದಿರುವ ಆಭ್ಯರ್ಥಿಗಳು ತಮ್ಮ ಪಾಸಿನ ಅವಧಿಯ ದಿ;31-12-2025 ರವರೆಗೆ ಮಾನ್ಯತೆ ಇದ್ದದನ್ನು ಫೆಬ್ರವರಿ 28 ರವರೆಗೆ ಮಾನ್ಯತೆ ಇರುತ್ತದೆ. ಆಯಾ ತಾಲ್ಲೂಕುವಾರು ಸಂಬಂಧಿಸಿದ ಘಟಕಗಳಲ್ಲಿ ವಿಕಲಚೇತನ ಪಾಸುಗಳನ್ನು ದಿ. 05-01-2026 ರಿಂದ ನವೀಕರಿಸಲಾಗುತ್ತದೆ. ವಿಕಲಚೇತನ ಪಾಸ್ ಹೊಂದಿರುವ ಅಭ್ಯರ್ಥಿಗಳು "ಸೇವಾ ಸಿಂದು" ಪೋರ್ಟಲ್ ಮುಖಾಂತರ ಅರ್ಜಿ ಸಲ್ಲಿಸಿ ನಂತರ ಎಲ್ಲಾ ತಮ್ಮ ಮೂಲದಾಖಲಾತಿಗಳ ಝರಾ-ಕ್ಸ್ ಪ್ರತಿಗಳೊಂದಿಗೆ ಹಳೆ ಪಾಸನ್ನು ವಾಪಸು ನೀಡಿ ನವೀಕರಿಸಲು ನಿಗದಿಪಡಿಸಿದ ನಗದು ಹಣ ರೂ.660 ಹಾಗೂ 2 ಭಾವಚಿತ್ರಗಳೊಂದಿಗೆ ಸಂಬಂಧಪಟ್ಟ ತಾಲ್ಲೂಕುವಾರು ಘಟಕಗಳ ಬಸ್ ನಿಲ್ದಾಣದಲ್ಲಿ ಹೊಸ ಪಾಸನ್ನು ಪಡೆಯಬಹುದು.

ಆದೇ ರೀತಿ ಹೊಸ ಪಾಸುಗಳನ್ನು ಪಡೆಯಲು ಗದಗ ವಿಭಾಗೀಯ ಕಚೇಯಲ್ಲಿ ಪಡೆಯಲು ವಾಕರಸಾ ಸಂಸ್ಥೆಯ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ ಸರಕಾರ
**ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯ, ಕೊಠಡಿ ಸಂಖ್ಯೆ 101, ಮೊದಲನೇ ಮಹಡಿ, ಜಿಲ್ಲಾ ಆಡಳಿತ ಭವನ, ಗದಗ-582101**
ಇ-ಮೇಲ್ : dhogadag@gmail.com ದೂರವಾಣಿ : 08372-233996

ಕ್ರ.ಸಂ:ಪೂರ್ವೈಕೆ/ಇ-ಟೆಂಡರ್/163/2025-26 ದಿನಾಂಕ : 02.01.2026

**ಅಲ್ಪಾವಧಿ ಟೆಂಡರ್ ಪ್ರಕಟಣೆ**

**2025-26**ನೇ ಸಾಲಿನಲ್ಲಿ ಗದಗ ಜಿಲ್ಲೆಯ ಅಧೀನ ಆರೋಗ್ಯ ಸಂಸ್ಥೆಗಳಲ್ಲಿರುವ ಕ್ಷ-ಕಿರಣ ವಿಭಾಗಗಳಿಗೆ ಪ್ರತಿ ನಿತ್ಯ ಉಪಯೋಗಿಸಲು ಅತೀ ಅವಶ್ಯವಾಗಿ ಬೇಕಾಗಿರುವಂತಹ ಕ್ಷ-ಕಿರಣ ಮಾದರಿಗಳನ್ನು ಒಳಗೊಂಡಂತಹ / ರಸಾಯನ ಸಾಮಗ್ರಿಗಳನ್ನು ಖರೀದಿಸುವ ಕುರಿತು ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಟೆಂಡರ್ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಇ-ಪ್ರೊಕ್ಯೂರ್‌ಮೆಂಟ್ ವೆಬ್‌ಸೈಟ್ https://kppp.karnataka.gov.in/ ಮೂಲಕ Tender Reference No-DHFWS/2025-26/IND2051 ಸಂಖ್ಯೆಯನ್ನು ಬಳಸಿಕೊಂಡು ಪರಿಶೀಲಿಸಬಹುದಾಗಿದೆ.

**ಸಹಿ/- ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಗದಗ**

ವಾಸಾಸಂಇ/ಗದಗ/ಕೆಎಸ್ಎಂಸಿಎ/498/2025-26

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka